ಸಂಪುಟ : 9 ಸಂಚಿಕೆ 225 ಪುಟ : 4 ಬೆಲೆ: 3.00 ಮಂಗಳವಾರ ಅಕ್ಟೋಬರ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 225 Pages : 4 Price : 3.00 Tuesday October 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಲಿಂ.ತೋಂಟದ ಸಿದ್ಧಲಿಂಗ ಶ್ರೀಗಳ 6ನೇ ವರ್ಷದ ಪುಣ್ಯಸ್ಮರಣೆ, ಪ್ರಶಸ್ತಿ ಪ್ರದಾನ, ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಡಾ. ಗೊ.ರು. ಚನ್ನಬಸಪ್ಪ

ಸಿದ್ಧಲಿಂಗ ಶ್ರೀಗಳು ಶ್ರೇಷ್ಠ ಸಂತರು

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವತತ್ವ ಪ್ರಸಾರಕ್ಕೆ ತಮ್ಮ ಬದುಕನ್ನು ಸಮರ್ಪಿಸಿಕೊಂಡಿದ್ದ ಲಿಂ.ತೋಂಟದ ಸಿದ್ಧಲಿಂಗ ಶ್ರೀಗಳು ನಡೆ-ನುಡಿಗಳಲ್ಲಿ ಒಂದಾಗಿದ್ದರು. ಧರ್ಮಗುರು ಎಂಬ ಸ್ಥಾನಕ್ಕೆ ಅಥವಾ ಸ್ವಾಮಿತ್ವಕ್ಕೆ ಘನತೆ ತಂದುಕೊಟ್ಟ ಅವರು ಶ್ರೇಷ್ಠ ಸಂತರಾಗಿದ್ದರು ಎಂದು ನಾಡೋಜ ಡಾ. ಗೊ.ರು. ಚನ್ನಬಸಪ್ಪ ನುಡಿದರು.

ಅವರು ಸೋಮವಾರ ನಗರದ ತೋಂಟದಾರ್ಯ ಮಠದಲ್ಲಿ ಜರುಗಿದ ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳ 6ನೇ ಪುಣ್ಯಸ್ಮರಣೆ ನಿಮಿತ್ತ 5 ಲಕ್ಷ ರೂ ಮೊತ್ತದ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಸ್ವೀಕರಿಸಿ ಸನ್ಮಾನೋತ್ತರವಾಗಿ ಮಾತನಾಡುತ್ತಿದ್ದರು.

ಡಾ.ತೋಂಟದ ಸಿದ್ಧಲಿಂಗ ಶ್ರೀಗಳ ಮೇಲೆ ನನಗೆ ಇದ್ದ ಅಪಾರ ಗೌರವ ಹಾಗೂ ಭಕ್ತಿಯ ಕಾರಣವಾಗಿ ಈ ಪ್ರಶಸ್ತಿಯನ್ನು ಸ್ವೀಕರಿಸಲು ಒಪ್ಪಿಕೊಂಡೆ. ಸದ್ಭಕ್ತಿ-ಸದಾಚಾರ-ಸದ್ವಿನಯದ ಸಾಕಾರಮೂರ್ತಿಗಳಾಗಿದ್ದ ಪೂಜ್ಯರು,



ಶ್ರಮಿಕರ-ದೀನ ದಲಿತರ ತಲ್ಲಣಗಳಿಗೆ ನಿರಂತರವಾಗಿ ಸ್ಪಂದಿಸುತ್ತಿದ್ದರು. ಅಂತಹ ಮಹಾಚೇತನದ ಸಂಪರ್ಕ ನನಗೆ ಇತ್ತು ಎಂಬುದೇ ಪುಣ್ಯವಿಶೇಷವಾಗಿದ್ದು, ಈ ಪ್ರಶಸ್ತಿಗೆ ನನ್ನನ್ನು ಆಯ್ಕೆ ಮಾಡಿದ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳಿಗೆ ಹಾಗೂ ಪ್ರಶಸ್ತಿ ಆಯ್ಕೆ ಸಮಿತಿಗೆ ಕೃತಜ್ಞತೆ ಸಲ್ಲಿಸುವೆ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಮಾತನಾಡಿ,

> ಶಾಸಕರಾದ ಡಾ. ಚಂದ್ರು ಲಮಾಣಿ ಮಾತನಾಡಿ, ಪೂಜ್ಯರು ನಾನು ಕಲಿತ ದಿಂಡೂರ ಶಾಲೆಗೆ ಆ ಕಾಲದಲ್ಲಿ ಒಂದು ಲಕ್ಷ ರೂಪಾಯಿಯಷ್ಟು ಹಣ ಖರ್ಚು ಮಾಡಿ ಆ ಶಾಲೆಯನ್ನು ಅಭಿವೃದ್ಧಿಪಡಿಸಿದರು. ಅವರ ಡಂಬಳ ಶಾಲೆಯಲ್ಲಿ ನಾನು ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲು ಬಂದಾಗ ನಮ್ಮ ತಾಂಡಾದ ವಿದ್ಯಾರ್ಥಿಗಳಿಗೆ ಅಂತಃಕರಣದಿಂದ ತಾಯಿಯಂತೆ ಉಣಬಡಿಸುತ್ತಿದ್ದರು. ಅವರು ನಮ್ಮ ಜನಾಂಗದ ಬಗ್ಗೆ ಹೊಂದಿದ್ದ ಪ್ರೀತಿ ಸದಾ ಸ್ಮರಣೀಯ ಎಂದರು.

ನಾನು ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವನಾಗಿದ್ದಾಗ ಜಾನಪದ ವಿಶ್ವವಿದ್ಯಾಲಯದ ಮೂಲಕ ಕರ್ನಾಟಕದ ಎಲ್ಲಾ ಗ್ರಾಮಗಳ ಇತಿಹಾಸವುಳ್ಳ 'ಗ್ರಾಮ ಚರಿತೆ' ಗ್ರಂಥಗಳನ್ನು ಪ್ರಕಟಿಸಬೇಕೆಂದು ಗೊ.ರು. ಚನ್ನಬಸಪ್ಪನವರು ನನಗೆ ಸಲಹೆ ನೀಡಿದ್ದರು. ಆ ಪ್ರಕಾರ ಅಂದು ನಮ್ಮ ಸರ್ಕಾರ 10 ಕೋಟಿ ರೂಪಾಯಿ ಬಿಡುಗಡೆ ಮಾಡಿ ಗ್ರಾಮಚರಿತೆ ಗ್ರಂಥಗಳನ್ನು ಪ್ರಕಟಿಸಿತು. ಸಾಮಾಜಿಕ ಚಿಂತನೆಯುಳ್ಳವರಾಗಿದ್ದ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ರಾಷ್ಟ್ರೀಯ ಪ್ರಶಸ್ತಿಗೆ ಗೊ.ರು ಚನ್ನಬಸಪ್ಪ ಸೂಕ್ತ ಆಯ್ಕೆಯಾಗಿದ್ದು, ಅವರಿಂದ ಪ್ರಶಸ್ತಿಯ ತೂಕ ಇನ್ನಷ್ಟು ಹೆಚ್ಚಾಗಿದೆ ಎಂದರು.

▸▸ 3ನೇ ಪುಟಕ್ಕೆ

> ಗೊ.ರು. ಚನ್ನಬಸಪ್ಪ ಅವರ ಬಸವತತ್ವ ಪ್ರಸಾರ ಹಾಗೂ ಕನ್ನಡದ ಕೈಂಕರ್ಯಗಳನ್ನು ಸಮೀಪದಿಂದ ನೋಡಿರುವ ನನಗೆ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಹೆಸರಿನ ಈ ರಾಷ್ಟ್ರೀಯ ಪ್ರಶಸ್ತಿಯನ್ನು ಅವರಿಗೆ ಪ್ರದಾನ ಮಾಡಲು ಹೆಮ್ಮೆ ಎನಿಸುತ್ತದೆ. ಶರಣ ಸಾಹಿತ್ಯವನ್ನು ಮನೆಮನೆಗೆ ಹಾಗೂ ಮನಮನಕ್ಕೆ ತಲುಪಿಸಲು ಅಪಾರ ಶ್ರಮ ವಹಿಸಿರುವ ಗೊ.ರು. ಚನ್ನಬಸಪ್ಪನವರು ಈ ಹಿಂದೆ ನಮ್ಮ ಕೋರಿಕೆಯ ಮೇರೆಗೆ ಭಾಷಾ ಆಯೋಗದ ಮುಖ್ಯಸ್ಥರಾಗಿ ಕೇಂದ್ರದ ಕಾನೂನುಗಳನ್ನು ಕನ್ನಡಕ್ಕೆ ತರ್ಜುಮೆ ಮಾಡುವಲ್ಲಿ ಬಹುದೊಡ್ಡ ಕೊಡುಗೆ ನೀಡಿದ್ದಾರೆ.
>
> – ಎಚ್.ಕೆ. ಪಾಟೀಲ.
> ಕಾನೂನು, ಪ್ರವಾಸೋದ್ಯಮ ಸಚಿವರು.

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 15 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 – ರಾಚೋಟೇಶ್ವರ ಗುಡಿ ಮುಂದಿನ ಭಾಗ, ಶರಣಪ್ಪ ಪಾಟೀಲ ಲೈನ್, ನಾಗಪ್ಪನ ಕಟ್ಟಿ, ಕಮತರ ಪ್ಲಾಟ್, ಹಕ್ಕಿ ಪ್ಲಾಟ್, ಮುನವಳ್ಳಿ ಪ್ಲಾಟ್, ಗೆಳೆಯರ ಬಳಗ, ಖಾರದ ಭಟ್ಟಿ, ಮಾನ್ವಿಯವರ ಲೈನ್, ಲಕ್ಕುಂಡಿಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ.16, 18, 19, 25 – ಮಣ್ಣಮ್ಮನವರ ಲೈನ್, ದುರ್ಗಮ್ಮನ ಗುಡಿ ಭಾಗ-1,2 , ನಾಲವಾಡದವರ ಓಣಿ, ಪಿ ಮತ್ತು ಟಿ ರಸ್ತೆ, ಕೋನೆರಿ ಹೊಂಡ ಹಳೆ ಲೈನ್, ಚೌಹಾಣದವರ ಲೈನ್, ಬಳಗೇರ ಲೈನ್, ಮದ್ಲಿ ಓಣಿ, ಮೀನಿನ ಮಾರ್ಕೆಟ್, ನಮಾಜಿಯವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 11 – ನಾಗಪ್ಪನ ಕಟ್ಟಿ, ಹನುಮಂತ ದೇವರ ಗುಡಿ ಲೈನ್, ಗಾಣಿಗರ ಭವನ, ನಿಸರ್ಗ ಬಡಾವಣೆ, ಶಿವ ಬಸವನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ಪಂಚಾಕ್ಷರಿ ನಗರ 3 ಮತ್ತು 4ನೇ ಕ್ರಾಸ್. ವಾರ್ಡ್ ನಂ. 1 – ಎಸ್ ಎಂ ಕೃಷ್ಣ ನಗರದ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ರಾಜ್ಯಾದ್ಯಂತ ಚರ್ಮ ಕುಶಲ ಕರ್ಮಿಗಳಿಗಾಗಿ 2024-25ನೇ ಸಾಲಿನ ಕ್ರಿಯಾ ಯೋಜನೆಯ ಪ್ರಕಾರ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನವಾಗಿದ್ದು, ಗದಗ ಜಿಲ್ಲೆಯ ಚರ್ಮ, ಕುಶಲಕರ್ಮಿಗಳು ಮಾದಿಗ, ಸಮಗಾರ, ಡೋರ, ಮಚಗಾರ ಜನಾಂಗದವರು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

https://sevasindhu.karnatak.govt.in ಪೋರ್ಟಲ್ ಮೂಲಕ ಅಥವಾ ಗ್ರಾಮ ಒನ್ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಸಂಯೋಜಕರು, ಜಿಲ್ಲಾಡಳಿತ ಭವನ, ಗದಗ ಜಿಲ್ಲೆ, ರೂ ನಂ. 122/1 , ಸಮಾಜ ಕಲ್ಯಾಣ ಇಲಾಖೆ (ಅಲೆಮಾರಿ ಅಭಿವೃದ್ಧಿ ಕೋಶ) ಸಂಪರ್ಕಿಸಬಹುದಾಗಿದೆ.

ಕೆರೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲರಿಂದ ಭೂಮಿ ಪೂಜೆ

ಕಾಮಗಾರಿ ಗುಣಮಟದಿಂದ ಕೂಡಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಇತ್ತೀಚೆಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿದರು.

75 ಲಕ್ಷ ಅನುದಾನದಲ್ಲಿ ನಾಗಾವಿ ಗ್ರಾಮದ ಹಿರೇಕೇರಿ ಹಾಗೂ ಭೂಕೈಯ್ಯನ ಕೆರೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ, ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು.

ನಂತರ ಸಚಿವರು ಮುಳಗುಂದದಲ್ಲಿನ ಅಬ್ಬಿಗೆರೆ ಕೆರೆ ಕಾಮಗಾರಿಗೆ 2 ಕೋಟಿ ರೂ ಅನುದಾನ ಒದಗಿಸಲಾಗಿದ್ದು, ಕೆರೆ ಕಾಮಗಾರಿಯಿಂದ ನಗರದಲ್ಲಿನ ಕೆರೆ ಸುತ್ತಲಿನ ಪ್ರದೇಶ ಸುಂದರವಾಗಿ ಕಂಗೊಳಿಸುವಂತಾಗಬೇಕು ಎಂದರು.

ಕುರ್ತಕೋಟೆಯಲ್ಲಿ 65 ಲಕ್ಷ ರೂ ಅನುದಾನದಲ್ಲಿ ಕೆರೆಯ ಅಭಿವೃದ್ಧಿ

ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳಬೇಕು. ನಿಗದಿಪಡಿಸಿದ ಅವಧಿಯೊಳಗೆ ಸಾರ್ವಜನಿಕರ ಬಳಕೆಗೆ ಲಭ್ಯವಾಗುವಂತೆ ಮಾಡಬೇಕೆಂದು ತಿಳಿಸಿದರು.

ಅಂತೂರ-ಬೆಂತೂರು ಗ್ರಾಮದಲ್ಲಿರುವ ಕೆರೆಯು ಸುಂದರ ಸ್ಥಳದಲ್ಲಿದ್ದು, ಇದನ್ನು ಇನ್ನಷ್ಟು ಸುಂದರಗೊಳಿಸಲು 1 ಕೋಟಿ ರೂ ಅನುದಾನ ನೀಡುವ ಮೂಲಕ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಕಾಮಗಾರಿಯು ಮುಂಬರುವ ಸಂಕ್ರಮಣದೊಳಗಾಗಿ ಪೂರ್ಣಗೊಳಿಸುವಂತೆ ಹಾಜರಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿ ಸದಸ್ಯ ಸಿದ್ದು ಪಾಟೀಲ ಸೇರಿದಂತೆ ನಾಗಾವಿ, ಮುಳುಗುಂದ, ಕುರ್ತಕೋಟಿ, ಅಂತೂರ್-ಬೆಂತೂರ್ ಗ್ರಾಮದ ಜನಪ್ರತಿನಿಧಿಗಳು, ಗಣ್ಯರು, ಸಾರ್ವಜನಿಕರು ಹಾಜರಿದ್ದರು.

ಕಾಂಗ್ರೆಸ್‌ನದ್ದು ಮತ ಓಲೈಕೆಯ ರಾಜಕಾರಣ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿ ಇಂಡಿ ಪಂಪ್, ಪೊಲೀಸ್ ಠಾಣೆ ಮೇಲಿನ ದಾಳಿಕೋರರ ವಿರುದ್ಧದ ಪ್ರಕರಣಗಳನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಹಿಂಪಡೆಯಲು ನಿರ್ಧರಿಸಿದ್ದು ಮತ ಓಲೈಕೆಯ ರಾಜಕಾರಣವಾಗಿದೆ ಎಂದು ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ಮೇಲಿನ ದಾಳಿ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ತನಿಖೆ ನಡೆಸುತ್ತಿದೆ. ಹೀಗಾಗಿ,

ಆರೋಪಿಗಳ ವಿರುದ್ಧದ ಕೇಸುಗಳನ್ನು ಹಿಂಪಡೆಯಲು ಹೊರಟಿರುವದು ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತರ ಓಲೈಕೆಯ ನೀತಿಯಿಂದ ರಾಜ್ಯದಲ್ಲಿ ಪೊಲೀಸ್ ಇಲಾಖೆಯ ನೈತಿಕತೆ ಹಾಗು ಆತ್ಮಸ್ಥೈರ್ಯ ಕುಂದುತ್ತಿದೆ. ರಾಜ್ಯ ಸರ್ಕಾರದ ಸಂವಿಧಾನ ವಿರೋಧಿ ನೀತಿ ನಾಚಿಕೆಗೇಡಿನ ಸಂಗತಿಯಾಗಿದ್ದು, ಇದೊಂದು ಮತ ಓಲೈಕೆಯ ರಾಜಕಾರಣವಾಗಿದೆ.

ಹುಬ್ಬಳ್ಳಿಯಲ್ಲಿ ನಡೆದ ಘಟನೆಯು ಸಮಾಜದ ಎಲ್ಲ ಜನರಲ್ಲಿ ನೆನಪು ಉಳಿಸಿದ್ದು ಇಂತಹ ಹೇಯ ಘಟನೆಯಿಂದ ಸಮಾಜಕ್ಕೆ ಒಂದು ಕೆಟ್ಟ ಸಂದೇಶ ಬಂದಿದೆ. ಇಂತಹ ಕ್ರೌರ್ಯವನ್ನು ಮಾಡಿದ ಗಲಭೆಕೋರರ ಮೇಲಿನ ಕೇಸ್ ವಾಪಸ್ ಪಡೆಯುತ್ತಿರುವದು ಖಂಡನೀಯ. ಕೂಡಲೇ ಈ ನಿರ್ಧಾರವನ್ನು ಕೈಬಿಡದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ನಾಳೆ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ,ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೃಷಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಬಕಾರಿ ಇಲಾಖೆ, ಜಿಲ್ಲಾ ಕಾರಾಗೃಹ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಹಾಗೂ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ -2024 ಕಾರ್ಯಕ್ರಮವನ್ನು ಅಕ್ಟೋಬರ್ 16 ರಂದು ಬೆ 10.30 ಗಂಟೆಗೆ ನಾಗಾವಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕ್ಯಾಂಪಸ್ ನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಡಾ.ದಿನೇಶ್ ಗುಂಡೂರಾವ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ , ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ , ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ನಾಗಾವಿ ಗ್ರಾಮ ಪಂಚಾಯತ್ ಅಧ್ಯಕ್ಷ ಸುರೇಶ ಪವಾರ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಆಹಾರ, ನಾಗರಿಕ, ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳು ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ , ಕ.ರಾ.ಗ್ರಾ. ಮತ್ತು ಪಂ. ರಾ. ವಿಶ್ವ ವಿದ್ಯಾಲಯದ ಕುಲಸಚಿವ ಪ್ರೊ. ಸುರೇಶ ನಾಡಗೌಡರ ಆಗಮಿಸುವರು.

ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮ

ಸಾಕ್ಷಿ ಸುಭಾಷಿತ

ಜೀವನವೆಂಬುದು ಕಠಿಣ ಸತ್ಯ.ಧೈರ್ಯವಾಗಿ ಅದನ್ನು ಎದುರಿಸಿ.ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

– ಸ್ವಾಮಿ ವಿವೇಕಾನಂದರು.

ಸಂಪಾದಕೀಯ

ರಾಜಕಾರಣ ಅಂದರೆ ಭಯೋತ್ಪಾದನೆ

ರಾಜಕಾರಣ ಎಂದರೆ ಈ ಹಿಂದೆ ಜನಸೇವೆ ಎನ್ನುವುದಾಗಿತ್ತು. ಸ್ವಾತಂತ್ರ್ಯ ನಂತರ ರಾಜಕಾರಣ ಕೇವಲ ಜನಸೇವೆಗೆ ಸೀಮಿತವಾಗಿತ್ತು. ಆದರೆ ಕಾಲ ಬದಲಾದಂತೆ ರಾಜಕಾರಣ ಹಣ ಗಳಿಕೆಯ ದಂಧೆಯಾಗಿ ಬದಲಾಯಿತು. ಈಗ ಹಣವಂತರು ಅಧಿಕಾರಕ್ಕಾಗಿ ನಡೆಸುವ ಹೋರಾಟವನ್ನು ರಾಜಕಾರಣ ಎನ್ನಬಹುದು.

ಹೀಗೆ ಹಣವಂತರು ಅಧಿಕಾರಕ್ಕಾಗಿ ನಡೆಸುವ ಹೋರಾಟ, ಜನರಲ್ಲಿ ಭಯ ಮೂಡಿಸಿದೆ. ಹೀಗಾಗಿ ಇಡೀ ರಾಜಕಾರಣವನ್ನು ಭಯೋತ್ಪಾದನೆ ಎನ್ನುವಂಥ ಕಾಲ ನಿರ್ಮಾಣವಾಗುತ್ತಿದೆ.

ಅಧಿಕಾರ ರಾಜಕಾರಣಕ್ಕಾಗಿ ಮುನಿರತ್ನ ಮಾಡಿದ್ದ ಆವಾಂತರಗಳು, ಹುನ್ನಾರಗಳು, ಯೋಜನೆಗಳನ್ನು ಗಮನಿಸಿದಲ್ಲಿ ಯಾವುದೇ ಭಯೋತ್ಪಾದಕರಿಗೆ ಕಡಿಮೆ ಇಲ್ಲದಂತೆ ಸ್ಕೆಚ್ಚು ರೂಪಿಸಿದ್ದು ಜಗಜ್ಜಾಹೀರವಾಗಿದೆ. ಆ ಮೂಲಕ ಅಧಿಕಾರ ರಾಜಕಾರಣ ಎನ್ನುವುದು ಎಷ್ಟರಮಟ್ಟಿಗೆ ಕಲುಷಿತವಾಗಿದೆ ಮತ್ತು ರಾಜಕೀಯದ ವ್ಯಾಖ್ಯಾನವೇ ಬದಲಾಗಿರುವುದಕ್ಕೆ ಮುನಿರತ್ನ ಪ್ರಕರಣ ಜ್ವಲಂತ ಉದಾಹರಣೆ.

ಇನ್ನು ಶುದ್ಧ ಹಸ್ತದ ರಾಜಕಾರಣಿಗಳು ಎಂದು ಪೋಸು ಕೊಡುವ ನಮ್ಮ ಶಾಸಕರು, ಸಚಿವರು, ವಿರೋಧ ಪಕ್ಷಗಳ ಸದಸ್ಯರು,

ಅಭಿವೃದ್ಧಿ ವಿಚಾರ, ನೀತಿ ನಿರೂಪಣೆಗಳು, ಸಾಮಾಜಿಕ ಸಮಸ್ಯೆಗಳ ಬಗ್ಗೆ ಚರ್ಚಿಸುವುದನ್ನೆ ಮರೆತಿದ್ದಾರೆ. ಈಗೇನಿದ್ದರೂ ರಾಜಕೀಯ ಕೆಸರೆರಚಾಟ ಒಂದೇ ಆಗಿದೆ.

ಇವತ್ತು ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರು ಒಬ್ಬರಿಗೊಬ್ಬರು ಭಯೋತ್ಪಾದಕ ಎಂದು ನಿಂದಿಸುತ್ತಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ, ಸಿಎಂ ಸಿದ್ದರಾಮಯ್ಯ ಅವರನ್ನು ನಿಂದಿಸುವ ಸಂದರ್ಭದಲ್ಲಿ ಭಯೋತ್ಪಾದಕ ಎಂದು ಹೇಳಿದರೆ, ಸಿಎಂ ಸಿದ್ದರಾಮಯ್ಯ ಕೇಂದ್ರ ಮಂತ್ರಿಯೊಬ್ಬರನ್ನು ಅದೇ ಶಬ್ದದಿಂದ ಟೀಕಿಸಿದ್ದಾರೆ. ಹೀಗೆ ಒಬ್ಬರಿಗೊಬ್ಬರೂ ಭಯೋತ್ಪಾದಕ ಎನ್ನುತ್ತಲೇ ರಾಜ್ಯದ ಜನರಲ್ಲಿ ಭಯ ಮೂಡಿಸುತ್ತಿದ್ದಾರೆ.

ರಾಜಕೀಯ ವ್ಯಕ್ತಿಗಳ ಈ ಭಯೋತ್ಪಾದನೆ ನಿಲ್ಲದಿದ್ದರೆ ಜನರಿಗೆ ಏನು ಮಾಡಬೇಕು ಎನ್ನುವುದು ಗೊತ್ತಿದೆ. ಮುಂದಿನ ಕೆಲ ವರ್ಷಗಳಲ್ಲಿಯೇ ಜನ ಈ ಎಲ್ಲದಕ್ಕೂ ಕಡಿವಾಣ ಹಾಕುವ ಕಾಲ ಸನ್ನಿಹಿತವಾಗುತ್ತಿದೆ.

ಅಬ್ಬಿಗೇರಿಯಲ್ಲಿ ಶಾಂತಿ ಸಂದೇಶ ಅನುಗ್ರಹಿಸಿದ ಶ್ರೀ ರಂಭಾಪುರಿ ಜಗದ್ಗುರುಗಳು

ನಂಬಿಕೆಯಿಂದ ಸಂಬಂಧಗಳು ಗಟ್ಟಿಯಾಗುತ್ತವೆ

■ ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ (ಮಾನವ ಧರ್ಮ ಮಂಟಪ)

ಆಧುನಿಕ ಯುಗದಲ್ಲಿ ಮಾನವೀಯ ಸುಮಧುರ ಸಂಬಂಧಗಳು ಕಡಿಮೆಯಾಗುತ್ತಿವೆ. ಮರಕ್ಕೆ ಬೇರು ಇಲ್ಲದಿದ್ದರೆ ಮರ ಉಳಿಯುವುದಿಲ್ಲ. ಅದೇ ರೀತಿ ಜೀವನದಲ್ಲಿ ನಂಬಿಕೆ ಇಲ್ಲದಿದ್ದರೆ ಸಂಬಂಧಗಳು ಉಳಿಯಲಾರವು. ಪರಸ್ಪರ ನಂಬಿಕೆ ಮತ್ತು ವಿಶ್ವಾಸದಿಂದ ಸಂಬಂಧಗಳನನ್ನು ಗಟ್ಟಿಗೊಳಿಸಬೇಕಾದ ಅವಶ್ಯಕತೆ ಇದೆಯೆಂದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಅನ್ನದಾನೇಶ್ವರ ಪ್ರೌಢಶಾಲಾ ಆವರಣದಲ್ಲಿ ನಿರ್ಮಿಸಿದ ಮಾನವ ಧರ್ಮ ಮಂಟಪದಲ್ಲಿ ಶಮೀ ಪೂಜೆ ನೆರವೇರಿಸಿ, ಸಿಂಹಾಸನಾರೋಹಣ ಮಾಡಿ, ಶಾಂತಿ ಸಂದೇಶ ಅನುಗ್ರಹಿಸುತ್ತಿದ್ದರು.

ಆತ್ಮ ಶಕ್ತಿ ಇರುವವನನ್ನು ಯಾವ ದುಷ್ಟ ಶಕ್ತಿಯೂ ನಾಶಗೊಳಿಸಲಾರದು. ಬೆಂಕಿಯಲ್ಲಿ ಚಿನ್ನ ಸುಡುತ್ತಿದ್ದರೂ ಕಪ್ಪಾಗದೇ ಹೊಳೆಯುವಚಿತೆ, ಸಜ್ಜನರು ಎಷ್ಟೇ ತೆ-ಾಂದರೆಯಾದರೂ ಸ್ವಾಭಿಮಾನದಿಂದ ಬಾಳಿ ಬದುಕುತ್ತಾರೆ. ಕೆಟ್ಟವರು ಒಳ್ಳೆಯವರನ್ನು ನಿಂದಿಸುವುದು ಆಗಸಕ್ಕೆ ಉಗುಳಿದಂತೆ. ಆ ಉಗುಳು ಉಗಿದವನ ಮುಖದ ಮೇಲೆ ಬೀಳುತ್ತದೆಯೇ ಹೊರತು ಒಳ್ಳೆಯವರಿಗೆ ತಾಗುವುದಿಲ್ಲ. ಮನುಷ್ಯ ಜೀವನದಲ್ಲಿ ಎಷ್ಟೇ ಬೆಳೆದು ಬಲಗೊಂಡರೂ ಮೂಲವನ್ನು ಮರೆಯಬಾರದು. ಧರ್ಮ ಪರಂಪರೆ, ಸಂಸ್ಕೃತಿ ಮಾನವನ ಅಭ್ಯುದಯಕ್ಕಾಗಿ ಮತ್ತು ಶ್ರೇಯಸ್ಸಿಗಾಗಿ ಇರುತ್ತವೆಯೇ ಹೊರತು ಅವನತಿಗಲ್ಲ.

ಅರಿತು ಬಾಳುವುದರಿಂದ ಬದುಕು ಬಂಗಾರಗೊಳ್ಳುತ್ತದೆ. ಹಣದಿಂದ ಎಲ್ಲವೂ ಸಿಗುವುದೆಂಬ ಭ್ರಮೆ ಇರಬಾರದು. ಹಣದಿಂದ ಔಷಧಿ ಕೊಳ್ಳಬಹುದು. ಆದರೆ ಆರೋಗ್ಯ ಕೊಳ್ಳಲಾಗದು. ಹಣದಿಂದ ಆಹಾರ ಕೊಳ್ಳಬಹುದು, ಆದರೆ ಪಚನಶಕ್ತಿ ಕೊಳ್ಳಲಾಗದು. ಹಣದಿಂದ ಹಾಸಿಗೆ ಕೊಳ್ಳಬಹುದು, ಆದರೆ ನಿದ್ದೆ ಕೊಳ್ಳಲಾಗದು. ಹಣದಿಂದ ಪುಸ್ತಕ ಕೊಳ್ಳಬಹುದು, ಅದರೆ ಜ್ಞಾನ ಕೊಳ್ಳಲಾಗದು. ಹಣದಿಂದ ಮನೆ ಕೊಳ್ಳಬಹುದು, ಆದರೆ ಮನದ ಶಾಂತಿ ಕೊಳ್ಳಲಾಗದು. ಹಣದಿಂದ ವಸ್ತುವನ್ನು ಕೊಳ್ಳಬಹುದು ಅದರೆ ಸತ್ಯವನ್ನು ಎಂದಿಗೂ ಕೊಳ್ಳಲಾಗದು. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕಾಗುತ್ತದೆ.

ಶಾಸಕ ಜಿ.ಎಸ್. ಪಾಟೀಲ ಕೃತಜ್ಞತಾ ನುಡಿ ನುಡಿದರು. ಸಿದ್ಧರಬೆಟ್ಟ ಶ್ರೀಗಳು ಸಮಾರಂಭದ ಯಶಸ್ಸಿಗಾಗಿ ಕಾರಣರಾದ ಸಮಸ್ತರಿಗೂ ದಾಸೋಹ ದಾನಿಗಳಿಗೂ ಅಭಿನಂದನೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಅಬ್ಬಿಗೇರಿ ಹಿರೇಮಠದ-ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳಿಗೆ 'ಸಂಸ್ಕೃತಿ ಸಂವರ್ಧನ ರತ್ನ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಶಾಸಕರಾದ ಜಿ.ಎಸ್. ಪಾಟೀಲ ಹಾಗೂ ದಸರಾ ಮಹೋತ್ಸವದ ಪದಾಧಿಕಾರಿಗಳು ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಬಿನ್ನವತ್ತಳೆ, ಕಾಣಿಕೆ, ರೇಷ್ಮೆ ಶಾಲು, ಫಲ-ಪುಷ್ಪ, ತಾಂಬೂಲ ಸಮರ್ಪಿಸಿ ಗೌರವಿಸಿದರು. ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ, ವಾರ್ತಾ ಕಾರ್ಯದರ್ಶಿ ಡಾ. ಗುರುಮೂರ್ತಿ ಯರಗಂಬಳಿಮಠ, ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ, ಡಾ. ಗುರುಪಾದಯ್ಯ ಸಾಲಿಮಠ, ಶಾಂತಾ ಆನಂದ, ವೀರೇಶ ಕಿತ್ತೂರ, ಬಸವರಾಜ ವೀರಾಪುರ, ಬಾಬುಗೌಡ್ರ ಪಾಟೀಲ, ವರ್ಮಪ್ಪ ಹನಮನಾಳ, ಮಂಜುನಾಥ ಅಂಗಡಿ, ಅಂದಪ್ಪ ವೀರಾಪುರ, ಬಸವರಾಜ ಪಲ್ಲೇದ, ಮಲ್ಲಿಕಾರ್ಜುನ ಹಲ್ಯಾಪುರ, ಸುರೇಶ ನಾಯಕ, ಸಿವಪ್ಪ ಶಿದ್ನೇಕೊಪ್ಪ, ಗುರಣ್ಣ ಅವರಕಿ, ಸೋಮನಗೌಡ ಕಣವಿ, ಭೀಮಣ್ಣ ಕಂಬಳಿ ಇದ್ದರು. ವೀರಯ್ಯ ಬಿ.ಸೋಮನಕಟ್ಟಿಮಠ ಸರ್ವರನ್ನು ಸ್ವಾಗತಿಸಿದರು.

ಸಮಾರಂಭಕ್ಕೂ ಮುನ್ನ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಶ್ರೀ ಅನ್ನದಾನೇಶ್ವರ ಪ್ರೌಢ ಶಾಲೆಯ ವರೆಗೆ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವ ಸಡಗರ ಸಂಭ್ರಮದಿಂದ ಜರುಗಿತು. ಈ ಸಂದರ್ಭದಲ್ಲಿ ನರೇಗಲ್ಲ, ಎಡೆಯೂರು, ಮಳಲಿ, ಸಂಗೊಳ್ಳಿ, ಹಂಪಸಾಗರ, ಕವಲೇದುರ್ಗ, ಪುರಗಿರಿ, ಹರಗಿನಡೋಣಿ, ದೊಡ್ಡಸಗರ, ತಮ್ಮಡಿಹಳ್ಳಿ, ಜಿಗೇರಿ ಮಠಾಧೀಶರು, ಬನಸವರಾಜ ಶರಣರು ಪಾಲ್ಗೊಂಡಿದ್ದರು.

ಬೆಳಿಗ್ಗೆ ಅಬ್ಬಿಗೇರಿ ಮೂಲ ಮಠದಿಂದ ಹೊಸ ಹಿರೇಮಠಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಭಕ್ತರೊಡನೆ ಪೂಜೆಗಾಗಿ ಅಗ್ರೋದಕ ಹೊತ್ತು ನಡೆದರು. ಸಾವಿರಾರು ಭಕ್ತರು ಕುಂಭ ಹೊತ್ತು ಜಗದ್ಗುರುಗಳೊಂದಿಗೆ ಹೆಜ್ಜೆ ಹಾಕಿದ ಘಳಿಗೆ ಅವಿಸ್ಮರಣೀಯವಾಗಿತ್ತು.

ದಾಸೋಹ ಸೇವೆಯನ್ನು ಶರಣಪ್ಪ ಶಿವಪ್ಪ ಕಿಟಗೇರಿ, ಪ್ರಭು ವಿ.ಬೇವಿನಕಟ್ಟಿ, ಶಕುಂತಲಾ ಬಸಪ್ಪ ನಿಡಗುಂದಿ, ಬಾಬು ವೀರಭದ್ರಪ್ಪ ನಿರಲೋಟ, ಬಸವರಾಜ ಮಲ್ಲಾಪುರ, ಪರಪ್ಪ ಕಳಕಪ್ಪ ಮಾಳಶೆಟ್ಟಿ, ಎನ್.ಬಾಬು ನವರಂಗಿ ಬೆಂಗಳೂರು ಸಲ್ಲಿಸಿದರು.

ಮನುಷ್ಯ ಮನುಷ್ಯನನ್ನು ಪ್ರೀತಿ-ವಿಶ್ವಾಸ ಕಾಣುವಂತಾದರೆ ಸಮಾಜದಲ್ಲಿ ಯಾವುದೇ ಸಂಘರ್ಷಗಳು ಉಂಟಾಗಲಾರವು. ಸಹನೆ, ಸದ್ವಿನಯ ನಿನ್ನದಾದರೆ ಜೀವನದಲ್ಲಿ ಯಶಸ್ಸು ನಿಶ್ಚಿತ. ಅಸುರೀ ಶಕ್ತಿಗಳ ಜೊತೆ ಹೋರಾಡಿ ದೈವೀ ಶಕ್ತಿಗಳಿಗೆ ವಿಜಯವಾದ ದಿನವೇ ವಿಜಯ ದಶಮಿ ಆಚರಣೆಯಾಗಿದೆ. ಸ್ವಧರ್ಮದಲ್ಲಿ ನಿಷ್ಠೆ ಮತ್ತು ಪರಧರ್ಮದಲ್ಲಿ ಸಹಿಷ್ಣುತೆ ಹೊಂದಿ ಸಾಮರಸ್ಯದಿಂದ ಬಾಳಬೇಕೆಂದು ರಂಭಾಪುರಿ ಜಗದ್ಗುರುಗಳು ನುಡಿದರು.

ದೇವಿ ಪುರಾಣ ಮಂಗಲೋತ್ಸವ ಕಾರ್ಯಕ್ರಮದಲ್ಲಿ ಡಾ. ಶಿವಕುಮಾರ ಸ್ವಾಮೀಜಿ

ಕ್ರೋಧದಿಂದ ಏನನ್ನೂ ಸಾಧಿಸಲಾಗದು

ಬೆಟಗೇರಿ ನಗರದ ಪುರಾತನ ಪ್ರಸಿದ್ಧ ಶ್ರೀ ಹಳೇ ಬನಶಂಕರಿ ದೇವಸ್ಥಾನದಲ್ಲಿ ದೇವಾಂಗ ಜನಾಂಗದ ಕುಲದೇವತೆ ಬನಶಂಕರಿ ದೇವಿಗೆ ನವರಾತ್ರಿ ಉತ್ಸವದ ಅಂಗವಾಗಿ ವಿಜಯದಶಮಿಯಂದು ಭಕ್ತರಿಂದ ಪಂಜುರ್ಲಿ ದೈವದ ಅಲಂಕಾರ ಮಾಡಲಾಗಿತ್ತು. ಸಮಾಜ ಬಾಂಧವರು ಹಾಗೂ ಭಕ್ತಾದಿಗಳು ಶ್ರೀ ದೇವಿಯ ಪಂಜುರ್ಲಿ ದೈವದ ಅಲಂಕಾರ ದರ್ಶನ ಪಡೆದ ಪುನೀತರಾದರು.

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಚಿದಾನಂದ ಅವಧೂತರು ರಚಿಸಿದ ದೇವಿ ಪುರಾಣವು ನಿಸ್ವಾರ್ಥ ಜೀವನ ಮಾರ್ಗವನ್ನು ಬೋಧಿಸುತ್ತದೆ ಎಂದು ಅಣ್ಣಿಗೇರಿ ದಾಸೋಹಮಠದ ಡಾ. ಶಿವಕುಮಾರ ಮಾಹಾಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಹಳೇಹುಡ ಓಣಿಯ ಗ್ರಾಮದೇವತಾ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಜರುಗಿದ ದೇವಿ ಪುರಾಣ ಮಂಗಲೋತ್ಸವ ಕಾರ್ಯಕ್ರಮದಲ್ಲಿ ಪುರಾಣ ಪ್ರವಚನಕಾರನ್ನು ಗೌರವಿಸಿ ಮಾತನಾಡಿ, ದೇವಿ ಮಾಹಾತ್ಮೆಯು ದೇಹದ ಮಹತ್ವವನ್ನು ಸಾರುತ್ತದೆ. ಕ್ರೋಧದಿಂದ ಏನನ್ನೂ ಸಾಧಿಸಲಾಗದು, ಲೌಕಿಕ ವಸ್ತು ವಿಷಯಗಳಿಗೆ ಮಹತ್ವ ನೀಡದೆ ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವುದರಿಂದ ಮನಸ್ಸು ಹಾಗೂ ದೇಹದ ಶುದ್ಧಿಯಾಗುತ್ತದೆ. ಇದರಿಂದ ಬದುಕು ಬಂಗಾರವಾಗಲು ಸಾಧ್ಯ ಎಂದರು.

ಪಿ.ಎಸ್. ಮರಿದೇವರಮಠ ಮಂಗಲ ನುಡಿದು ಮಾತನಾಡಿ, ಹಣವಿದ್ದಾಗಲೇ ದಾನ, ಧರ್ಮ ಮಾಡಬೇಕು. ದೇವಿ ಪುರಾಣ ಕೇಳುವುದರಿಂದ ನಮ್ಮಲ್ಲಿರುವ ಕಾಮ, ಕ್ರೋಧ, ಮೋಹ, ಮದ, ಮತ್ಸರಗಳು ದೂರವಾಗಿ ಸದ್ಗುಣಗಳನ್ನು ಅಳವಡಿಸಿಕೋಳ್ಳಲು ಸಹಕಾರಿಯಾಗುತ್ತದೆ ಎಂದರು.

ಅಶೋಕ ಸೋನಗೋಜಿ ಮಾತನಾಡಿ, 2025/26ರಲ್ಲಿ ಗ್ರಾಮದೇವಿಯ ಟೋಪ್ ಜಾತ್ರೆ ಹಮ್ಮಿಕೊಂಡಿದ್ದು, ನೂತನ ದೇವಿಯ ಮೂರ್ತಿಗಳೊಂದಿಗೆ ವಿಜ್ರಂಭಣೆಯಿಂದ ಜಾತ್ರೆ ಜರುಗಲಿದೆ. ಸಕಲ ಸದ್ಭಕ್ತರು ತನು, ಮನ, ಧನ ಸಹಕಾರ ನೀಡಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದರು.

ಗ್ರಾಮದೇವತಾ ಆಡಳಿತ ಮಂಡಳಿಯ ಅಧ್ಯಕ್ಷ ಎಸ್.ಸಿ. ಬಡ್ನಿ ಅಧ್ಯಕ್ಷತೆ ವಹಿಸಿದ್ದರು. ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಉಪಾಧ್ಯಕ್ಷೆ ಅನಸೂಯಾ ಸೋಮಗೇರಿ, ಪ.ಪಂ ಸದಸ್ಯ ಕೆ.ಎಲ್. ಕರಿಗೌಡರ, ಬಸವರಾಜ ಹಾರೋಗೇರಿ, ಇಮ್ಮಣ್ಣಾ ಶೇಖ, ಮಾಹಾಂತೇಶ ನೀಲಗುಂದ, ಮಾಹಾದೇವಪ್ಪಾ ಗಡಾದ, ಹೊನ್ನಪ್ಪ ಜೋಗಿ, ಮೌನೇಶ ನೀಲಗುಂದ, ಜಗದೀಶ ಬಟ್ಟೂರ, ಗೌರಮ್ಮಾ ಬಡ್ನಿ, ರಾಜೇಶ್ವರಿ ಬಡ್ನಿ, ಪರಸಪ್ಪಾ ಸಂಗನಪೇಟಿ, ಶೇಷಾಂಕ ಕೋಳಿವಾಡ, ಮಹೇಶ ನೀಲಗುಂದ, ಕಾಶೀನಾಥ ಮರಿದೇವರಮಠ, ಕೆ.ಎಸ್. ಮಳ್ಳಿ, ವರ್ಷಾ ಬಾರಕೇರ ಇದ್ದರು.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಮಾತನಾಡಿ, ಜೀವನದಲ್ಲಿ ತ್ಯಾಗ ಮನೋಭಾವದಿಂದ ಸಮಾಜದ ಬದಲಾವಣೆ ಸಾಧ್ಯವಾಗುತ್ತದೆ. ಪ್ರತಿಯೊಬ್ಬರೂ ಕಾಯಕದಲ್ಲಿ ನಿರತರಾದೊಡೆ ಜೀವನ ಸಾರ್ಥಕವಾಗುತ್ತದೆ. ದೇವಿ ಪುರಾಣ ಆಲಿಸುವುದರಿಂದ ದೈಹಿಕ ಹಾಗೂ ಮಾನಸಿಕ ನೆಮ್ಮದಿ ಪ್ರಾಪ್ತಿಯಾಗುತ್ತದೆ ಎಂದರು.

ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ರೈತರಿಗೆ ವಿತರಿಸುವ ಉದ್ದೇಶದಿಂದ ಗದಗ ಜಿಲ್ಲೆ ಸಾಮಾನ್ಯ ವರ್ಗ ಘಟಕದ ವೈಯಕ್ತಿಕ ಫಲಾನುಭವಿಗೆ ಸುಗರ್ ಕೇನ್ ಹಾರ್ವೆಸ್ಟರ್ ಹಬ್ ಕ್ರಿಯಾ ಯೋಜನೆ ಅನುಮೋದನೆಗೊಂಡಿದೆ.

ಈ ಯೋಜನೆಯಡಿ ಸಾಮಾನ್ಯ ವರ್ಗ ಘಟಕದಡಿ ವೈಯಕ್ತಿಕ ಫಲಾನುಭವಿಗೆ ಗರಿಷ್ಠ 39 ಲಕ್ಷ (ಶೇ. 40% ಸಹಾಯಧನ) ಇರುತ್ತದೆ. ಆಸಕ್ತ ರೈತರು ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ಈ ಕೆಳಗಿನ ದಾಖಲಾತಿಯೊಂದಿಗೆ ಅಕ್ಟೋಬರ್ 30 ರೊಳಗಾಗಿ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸುವುದು. ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಅರ್ಜಿಗಳನ್ನು ಪರಿಶೀಲಿಸಿ, ಜಿಲ್ಲಾಮಟ್ಟದ ಉಪಕರಣ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಉಪ ಕೃಷಿ ನಿರ್ದೇಶಕರಿಗೆ ಸಲ್ಲಿಸುವುದು. ನಂತರ ಉಪ ಕೃಷಿ ನಿರ್ದೇಶಕರ ಕಚೇರಿಯಿಂದ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿ ಜಿಲ್ಲಾಮಟ್ಟದ ಉಪಕರಣ ಸಮಿತಿಯಲ್ಲಿ ಮಂಡಿಸಲಾಗುವುದು.

ಜಿಲ್ಲಾಮಟ್ಟದ ಸಮಿತಿ ಸಭೆಯಲ್ಲಿ ಸುಗರ್ ಕೇನ್ ಹಾರ್ವೆಸ್ಟರ್ ಮತ್ತು ಕಂಬೈನಡ್ ಹಾರ್ವೆಸ್ಟರ್ ಹಬ್‌ಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿ ಅರ್ಹಗೊಂಡಲ್ಲಿ ಲಾಟರಿ ಮುಖಾಂತರ ಫಲಾನುಭವಿಯನ್ನು ಆಯ್ಕೆ ಮಾಡಲಾಗುವುದು. ನಂತರ ಜಂಟಿ ಕೃಷಿ ನಿರ್ದೇಶಕರ ಕಚೇರಿಯಿಂದ ಅಯ್ಕೆಯಾದ ಫಲಾನುಭವಿಗೆ ಕೃಷಿ ಯಂತ್ರೋಪಕರಣಗಳನ್ನು ದಾಸ್ತಾನೀಕರಿಸಲು ಕಾರ್ಯಾದೇಶ ನೀಡಲಾಗುವುದು. ಸುಗರ್ ಕೇನ್ ಹಾರ್ವೆಸ್ಟರ್ ಮತ್ತು ಕಂಬೈನಡ್ ಹಾರ್ವೆಸ್ಟರ್ ಹಬ್‌ವಾರು ಸ್ವೀಕೃತವಾದ ಯಂತ್ರೋಪಕರಣಗಳನ್ನು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ, ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಮತ್ತು ಉಪ ಕೃಷಿ ನಿರ್ದೇಶಕರು ಪರಿಶೀಲಿಸಿ, ಸಹಾಯಧನವನ್ನು ನಿಯಮಾನುಸಾರ ಸಂಬಂಧಿಸಿದ ಸಾಲದ ಬ್ಯಾಂಕ್ ಖಾತೆಗೆ ಕ್ರೆಡಿಟ್ ಲಿಂಕಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಮೂಲಕ ಜಮಾ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫಲಾನುಭವಿಗಳು ಅರ್ಜಿಯೊಂದಿಗೆ ಸಲ್ಲಿಸಬೇಕಾದ ವಿವರಗಳು

ಪಹಣಿ ಪ್ರತಿ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಮತ್ತು ಎಪ್ ಐ ಡಿ ಸಂಖ್ಯೆ. ರೂ. 20 ಛಾಪಾ ಕಾಗದದ ಮೇಲೆ ಹಬ್‌ನ್ನು ಪರಬಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ (ನೋಟರಿಯೊಂದಿಗೆ) ಸಹಾಯಧನವು ಕ್ರೆಡಿಟ್ ಲಿಂಕಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಆಗಿರುವುದರಿಂದ ಸಂಬಂಧಿಸಿರುವ ಬ್ಯಾಂಕ್ ನಿಂದ ತಾತ್ವಿಕ ಸಾಲ ಮಂಜೂರಾತಿ ಪತ್ರ

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ/ಉಪ ಕೃಷಿ ನಿರ್ದೇಶಕರ ಕಚೇರಿ/ಜಂಟಿ ಕೃಷಿ ನಿದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ.

ಗದಗ ಎಸ್‌ಎಸ್‌ಕೆ ಸಮಾಜದಿಂದ ನಮ್ಮೂರು ದಸರಾ ಕಾರ್ಯಕ್ರಮ

ಎಸ್‌ಎಸ್‌ಕೆ ಸಮಾಜವು ಜೇನು ಗೂಡಿನಂತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಕೆ ಸಮಾಜವು ಜೇನು ಗೂಡು ಇದ್ದಂತೆ. ಎಲ್ಲರೂ ಒಂದಾಗಿ ಸಮಾಜವನ್ನು ಮುನ್ನಡೆಸೋಣ ಎಂದು ರಾಜ್ಯಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ರತ್ನಾಬಾಯಿ ಬದಿ ಹೇಳಿದರು.

ನಗರದ ಹಳೇ ಸರಾ

ಹೊಳೆ ಆಲೂರು ಗ್ರಾಮದಲ್ಲಿ ಉದ್ಯೋಗ ಖಾತ್ರಿ ನಡಿಗೆ ಸಬಲತೆಯಡಗೆ ಕಾರ್ಯಕ್ರಮ

ನರೇಗಾದೊಂದಿಗೆ ಬದುಕು ಬದಲಾಯಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಪ್ರದೇಶದ ಕೂಲಿಕಾರರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳಿಗೆ ಹೆಚ್ಚು ಒತ್ತು ನೀಡಿ, ಆರ್ಥಿಕ ನೆರವು ಪಡೆದು ಬದುಕು ಬದಲಾಯಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಸದೃಢರಾಗಬೇಕು ಎಂದು ಗ್ರಾಮೀಣ ಉದ್ಯೋಗದ ಸಹಾಯಕ ನಿರ್ದೇಶಕ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ಹೊಳೆ ಆಲೂರ ಗ್ರಾಮದ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಉದ್ಯೋಗ ಖಾತ್ರಿ ನಡಿಗೆ ಸಬಲತೆಯಡಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಬಾಗದ ಕೂಲಿಕಾರರ ಜೀವನಮಟ್ಟ ಸುಧಾರಿಸುವ ಕಾಮಗಾರಿಗಳು ನರೇಗಾ ಯೋಜನೆಯಡಿ ಲಭ್ಯವಿದ್ದು, ಗ್ರಾ.ಪಂ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದು ಯೋಜನೆಯ ಲಾಭವನ್ನು ಪಡೆದುಕೊಳ್ಳಬೇಕು. ಉದ್ಯೋಗ ಖಾತ್ರಿ ಯೋಜನೆಯಲ್ಲಿ ವರ್ಷಕ್ಕೆ 100 ದಿನಗಳವರೆಗೆ ಕೂಲಿಕಾರರಿಗೆ ಕೆಲಸ ನೀಡುತ್ತೇವೆ. ಉದ್ಯೋಗ ಚೀಟಿ ಪಡೆದ ಕುಟುಂಬ ವರ್ಗ ವರ್ಷಕ್ಕೆ 100 ದಿನ ಕೆಲಸ ಮಾಡಿದರೆ ವಾರ್ಷಿಕವಾಗಿ ಯೋಜನೆಯಡಿ 34800 ರೂ. ಪಡೆಯುತ್ತಾರೆ. ಯೋಜನೆಯಡಿ ಅರ್ಹ ಫಲಾನುಭವಿಗಳು ದನದ ಕೊಟ್ಟಿಗೆ, ಬಚ್ಚಲು ಗುಂಡಿ, ಕೋಳಿ ಶೆಡ್, ಕೃಷಿ ಹೊಂಡ ಕಾಮಗಾರಿ ಮಾಡಿಕೊಳ್ಳಲು ಸಾಧ್ಯವಿದೆ. ತೋಟಗಾರಿಕೆ ಇಲಾಖೆಯಡಿ ಬೆಳೆಗಳಾದ ತೆಂಗು, ಮಾವು, ದಾಳಿಂಬೆ, ಸೀಬೆ, ಗುಲಾಬಿ, ಮಲ್ಲಿಗೆ, ಬಾಳೆ ಮತ್ತು ಪಪ್ಪಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಆರ್ಥಿಕ ನೆರವು ಪಡೆದು ಬೆಳೆದುಕೊಳ್ಳಬಹುದು ಎಂದರು.

ಮುಖ್ಯವಾಗಿ, ಮಹಿಳೆಯರು ಆರ್ಥಿಕವಾಗಿ ಸದೃಢವಾದಾಗ ಮಾತ್ರ ಕುಟುಂಬ ಸದೃಢವಾಗುತ್ತದೆ. ಈ ಹಿನ್ನೆಲೆಯಲ್ಲಿ ಮಹಿಳೆಯರನ್ನು ಸದೃಢ ಮಾಡಲು ಸರ್ಕಾರ ಗಂಡು ಮತ್ತು ಹೆಣ್ಣು ಕೂಲಿಕಾರರಿಗೆ ಸಮಾನವಾಗಿ 349 ರೂಪಾಯಿ ದಿನವೊಂದಕ್ಕೆ ಯೋಜನೆಯಡಿ ಕೂಲಿ ಮೊತ್ತ ನೀಡುತ್ತಿದೆ. ಕೂಲಿಕಾರರ ಕೇಂದ್ರಬಿಂದುವಾಗಿರುವ ನರೇಗಾ ಯೋಜನೆಯು ಗ್ರಾಮೀಣ ಕೂಲಿಕಾರರಿಗೆ ಕೈತುಂಬ ಉದ್ಯೋಗ ನೀಡುವ ಕಾರ್ಯವನ್ನು ಮಾಡುತ್ತಿದೆ ಎಂದು ಚಂದ್ರಶೇಖರ ಬಿ.ಕಂದಕೂರ ತಿಳಿಸಿದರು.

ಮಹಿಳೆಯರು ಮತ್ತು ವಿಶೇಷಚೇತನರಿಗೆ ಯೋಜನೆಯಡಿ ಕೆಲಸದಲ್ಲಿ ವಿಶೇಷ ರಿಯಾಯತಿ ಇದೆ. ಕೂಲಿಕಾರರಿಗೆ ಇರುವ ಸೌಲಭ್ಯಗಳನ್ನು ಯೋಜನೆಯಡಿ ಪಡೆದುಕೊಂಡು ಗ್ರಾಮೀಣ ಪ್ರದೇಶದ ಕೂಲಿಕಾರರು ಕೆಲಸದ ಸಲುವಾಗಿ ಬೇರೆ ಸ್ಥಳಕ್ಕೆ ಹೋಗದೇ ಇದ್ದೂರಲ್ಲೇ ನರೇಗಾದಲ್ಲಿ ಕೆಲಸ ಮಾಡಬೇಕು. ಈಗಾಗಲೇ ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ವೈಯಕ್ತಿಕ ಕಾಮಗಾರಿಗಳ ವಿತರಣಾ ಮೇಳದ ಕರಪತ್ರಗಳನ್ನು ಮುದ್ರಿಸಿ ಮನೆ ಮನೆಗೆ ಹಂಚುವ ಮೂಲಕ ಪ್ರಚಾರ ಮಾಡುತ್ತಿದ್ದೇವೆ. ಯೋಜನೆಯಡಿ ಇರುವ ವಿವಿಧ ಕಾಮಗಾರಿಗಳನ್ನು ಪಡೆದುಕೊಳ್ಳಲು ಇಚ್ಛಿಸುವ ಕೂಲಿಕಾರರು ಗ್ರಾ.ಪಂ ಕಚೇರಿಗೆ ಬಂದು ಬೇಡಿಕೆ ಸಲ್ಲಿಸಬಹುದು ಎಂದರು.

ಗ್ರಾ.ಪಂ ಅಧ್ಯಕ್ಷೆ ಚಂದವ್ವ ಪೂಜಾರಿ, ಉಪಾಧ್ಯಕ್ಷೆ ಜೋತಿ ಗಾಣಗೇರ, ಸದಸ್ಯರಾದ ಸಂತೋಷ ದೊಡ್ಡಮನಿ, ಅಭಿವೃದ್ಧಿ ಅಧಿಕಾರಿ ಬಸವರಾಜ ಗಿರಿತಮ್ಮನ್ನವರ, ತಾ.ಪಂ ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ, ತಾ.ಪಂ ಐಇಸಿ ಸಂಯೋಜಕ ಮಂಜುನಾಥ ಎಸ್, ಬಿಎಫ್‌ಟಿ ಈರಣ್ಣ ದಳವಾಯಿ, ಗ್ರಾ.ಪಂ ಕಾರ್ಯದರ್ಶಿ ಮಲ್ಲಿಕಾರ್ಜುನ ಭಾವಿ, ಸ್ವ-ಸಹಾಯ ಸಂಘದ ಮಹಿಳಾ ಸದಸ್ಯರು, ಗ್ರಾ.ಪಂ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

ಶರಣ ತತ್ವಗಳನ್ನು ಮನೆ-ಮನಗಳಿಗೆ ತಲುಪಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರಾಗಿ ನೇಮಕಗೊಂಡ ಶಿರಹಟ್ಟಿಯ ಕೆ.ಎ. ಬಳಿಗೇರರಿಗೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷರಾದ ಶ್ರೀ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆದೇಶ ಪ್ರತಿಯನ್ನು ನೀಡಿ ಆಶೀರ್ವದಿಸಿದರು.

ನಂತರ ಮಾತನಾಡಿದ ಶ್ರೀಗಳು, ಪರಿಷತ್ತಿನ ಆಶಯದಂತೆ ಕಾರ್ಯಕ್ರಮಗಳನ್ನು ಆಯೋಜಿಸಿ ಶರಣರ ತತ್ವ ಚಿಂತನೆಗಳನ್ನು ಮನೆ-ಮನಗಳಿಗೆ ತಲುಪಿಸುವ ಕಾರ್ಯವನ್ನು ರಾಜ್ಯಾಧ್ಯಕ್ಷರ ಮಾರ್ಗದರ್ಶನದಲ್ಲಿ ಜಿಲ್ಲೆಯ ಹಿಂದಿನ ಜಿಲ್ಲಾಧ್ಯಕ್ಷರ ನೆರವಿನೊಂದಿಗೆ ಹಾಗೂ ಜಿಲ್ಲೆಯ ಎಲ್ಲ ಶರಣಬಂಧುಗಳ ಸಹಕಾರವನ್ನು ಪಡೆದುಕೊಂಡು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗಬೇಕೆಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಿವಪ್ರಕಾಶ್ ಮಹಾಜನಶೆಟ್ಟರ, ಆಯ್.ಬಿ. ಬೆನಕೊಪ್ಪ, ಚಂದ್ರಕಾಂತ ನೂರ ಶೆಟ್ಟರ್, ನಾಗರಾಜ ಲಕ್ಕುಂಡಿ, ಎಂ.ಕೆ. ಲಮಾಣಿ, ವಿವೇಕಾನಂದ ಗೌಡ ಪಾಟೀಲ್, ಬಸವರಾಜ್ ಕೊಟಗಿ, ಕಲ್ಲಯ್ಯ ಸಾಲಿಮಠ, ವೆಂಕಟೇಶ್ ಮಾತಾಡೆ, ವೀರೇಶ್ ಬದಾಮಿ, ಸಿ.ಜಿ. ಹಿರೇಮಠ, ಪಿ.ಬಿ. ಕರಾಟೆ, ಅಕ್ಬರ್ ಯಾದಗಿರಿ, ಎಲ್.ಎಸ್. ಅರಳಹಳ್ಳಿ, ಎಸ್.ಎಂ. ಮರಿಗೌಡ್, ಎಂ.ಕೆ. ಕಳ್ಳಿಮಠ, ಬಸವರಾಜ್ ಸೆಲ್ಲೆಪ್ಪನವರ, ಎಂ.ಎ. ಮಕಾಂದರ್, ಸಿ.ಪಿ. ಕಾಳಗಿ, ಶಿವಮೂರ್ತಿ ಕರಿಗೌಡ್ರ ಮುಂತಾದವರು ಭಾಗವಹಿಸಿದ್ದರು.

ಸಾಧಕರಿಗೆ ಅಭಿನಂದನಾ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಹಿರಿಯ ವೈದ್ಯ ಡಾ.ಪ್ಯಾರಾಲಿ ನೂರಾನಿ ಮತ್ತು ಹಿಟೆನ್ ಫ್ಯಾನ್ ಕ್ಲಬ್ ಸದಸ್ಯರು ನಗರದ ಕ್ಲಾರ್ಕ್ಸ್ ಇನ್ ಹೊಟೆಲ್‌ನಲ್ಲಿ ಸಾಧಕರಿಗೆ ಅಭಿನಂದನಾ ಕಾರ್ಯಕ್ರಮವನ್ನು ಆಯೋಜಿಸಿದ್ದರು.

30 ವರ್ಷಗಳಿಗೂ ಹೆಚ್ಚು ಕಾಲ ಗುಣಮಟ್ಟದ ನಿರ್ವಹಣೆ ಮತ್ತು ಮಾಪನಾಂಕ ನಿರ್ಣಯದಲ್ಲಿ ಅಮೋಘ ಸೇವೆಗಾಗಿ ಅಂತಾರಾಷ್ಟ್ರೀಯ ಮಾನ್ಯತೆ ಪಡೆದ ಇಂಜಿನಿಯರ್ ಎ.ದಾಸ್ ಗುಪ್ತಾರನ್ನು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಜಿವ್ಸ್ ಎಂಬಿಬಿಎಸ್ ವಿದ್ಯಾರ್ಥಿಗಳ ಫಲಿತಾಂಶಕ್ಕಾಗಿ ಜಿವ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ ಅವರನ್ನು, 3 ಕಿಡ್ನಿ ಕಸಿ ಯಶಸ್ವಿಯಾಗಿ ನಿರ್ವಹಿಸಿದ ಮೂತ್ರಶಾಸ್ತ್ರಜ್ಞ ಮತ್ತು ಕಿಡ್ನಿ ಕಸಿ ಶಸ್ತ್ರಚಿಕಿತ್ಸಕ ಡಾ.ಅವಿನಾಶ ಓದುಗೌಡರ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಡಾ.ಶ್ರೀಧರ ಕುರುಡಗಿ ಮಾತನಾಡಿ, ದಾಸಗುಪ್ತ ಅವರ ಸಾಧನೆಗಳ ಬಗ್ಗೆ ಹೆಮ್ಮೆಯ ನುಡಿಗಳನ್ನಾಡಿದರು. ಡಾ. ರಾಧಿಕಾ ಕುಲಕರ್ಣಿ, ಡಾ. ಸಾದೀಖಾ ನೂರಾನಿ, ಡಾ. ಸುನಿತಾ ಕುರುಡಗಿ ಮತ್ತು ಡಾ. ಅನಿತಾ ಧರಣಾ ಅವರು ಡಾ. ಚಿತ್ರಾ ದಾಸ್‌ಗುಪ್ತಾ ಅವರನ್ನು ಸ್ವಾಗತಿಸಿದರು. ಸಮಾರಂಭದಲ್ಲಿ ಡಾ. ಉದಯ ಕುಲಕರ್ಣಿ, ಡಾ. ಪವಾಡಶೆಟ್ಟರ, ಡಾ. ಪ್ರಕಾಶ್ ಧರಣಾ ಮುಂತಾದವರಿದ್ದರು.

ಗದುಗಿನ ಅಡವೀಂದ್ರ ಸ್ವಾಮಿ ಮಠದ ಅನ್ನಪೂರ್ಣೆಶ್ವರಿ ದೇವಿ ಮಹಾರಥೋತ್ಸವವು ರವಿವಾರ ಸಂಜೆ ಸಕಲ ಮಂಗಲ ವಾದ್ಯ ವೈಭವದೊಂದಿಗೆ, ಭಕ್ತಾಧಿಗಳ ಜಯಘೋಷಣೆಯೊಂದಿಗೆ ಸಂಭ್ರಮದಿಂದ ಜರುಗಿತು.

ಬನ್ನಿ ಮುಡಿಯುವ ವಿಶೇಷ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ದುರ್ಗಾ ದೇವಿ ದೇವಸ್ಥಾನದಲ್ಲಿ ದಸರಾ ಹಬ್ಬದ ಅಂಗವಾಗಿ ವಿಶೇಷ ಬನ್ನಿ ಮುಡಿಯುವ ಕಾರ್ಯಕ್ರಮ ಜರಗಿತು. ಈ ಗ್ರಾಮದ ಸಂಪ್ರದಾಯದಂತೆ ಇದೇ ದಿನ ಮೊಳಕೆಯೊಡೆದ ಬನ್ನಿ ಸಸಿಯನ್ನು ಪತ್ತೆಹಚ್ಚಿ ಅಲ್ಲಿ ಪೂಜೆ ಸಲ್ಲಿಸಿದ ನಂತರ ಬನ್ನಿ ಮುಡಿಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ.

ಸಂಪ್ರದಾಯದಂತೆ ದೇವಿಯ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಹೊತ್ತು, ರೈತರ ಜಮೀನುಗಳಲ್ಲಿ ಮೊಳಕೆಯೊಡೆದ ಬನ್ನಿ ಸಸಿಯನ್ನು ಹುಡುಕುತ್ತಾ ಹೊರಟ ಭಕ್ತಾದಿಗಳು ಎರಡು ಗಂಟೆಗಳ ಕಾಲ ಹುಡುಕಿದ ನಂತರ ಮೊಳಕೆಯೊಡೆದ ಬನ್ನಿ ಸಸಿ ಸಿಕ್ಕ ತರುವಾಯ ಪೂಜೆ ಸಲ್ಲಿಸಿ ಬನ್ನಿ ಮುಡಿಯಲು ಪ್ರಾರಂಭವಾಯಿತು.

ಗ್ರಾಮದ ರೈತ ಭೀಮಪ್ಪ ದೇವಪ್ಪ ಕಂಕರಿ ಇವರ ಜಮೀನಿನಲ್ಲಿ ಮೊಳಕೆಯೊಡೆದ ಬನ್ನಿ ಸಸಿ ಪತ್ತೆಯಾಯಿತು. ದುರ್ಗಾ ದೇವಿಯ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಸುಮಂಗಲಿಯರು ದೇವಿಗೆ ಉಡಿ ತುಂಬಿದ ನಂತರ ಗ್ರಾಮದಲ್ಲಿ ದಸರಾ ದರ್ಬಾರ್ ನಡೆಯಿತು. ಬನ್ನಿ ಮುಡಿಯುವ ಕಾರ್ಯಕ್ರಮದ ನಂತರ ಗ್ರಾಮಸ್ಥರು ಪರಸ್ಪರ ಬನ್ನಿ ವಿನಿಮಯ ಮಾಡುವುದರ ಮೂಲಕ ಶುಭಾಶಯ ಕೋರಿದರು.

ಸಂಭ್ರಮದ ಕುಂಭೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಅಡವೀಂದ್ರ ಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದ 44ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಹಾಗೂ 10ನೇ ವರ್ಷದ ಅನ್ನಪೂರ್ಣೆಶ್ವರಿ ದೇವಿಯ ಮಹಾರಥೋತ್ಸವದ ಅಂಗವಾಗಿ ರವಿವಾರ ಮುಂಜಾನೆ ಕುಂಭೋತ್ಸವ ಜರುಗಿತು.

ಗದಗ ಒಕ್ಕಲಗೇರಿಯ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಿಂದ ಮಹಿಳೆಯರು ಕೈಗೊಂಡ ಕುಂಭೋತ್ಸವವು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅಡವೀಂದ್ರ ಸ್ವಾಮಿ ಮಠಕ್ಕೆ ಆಗಮಿಸಿತು.

ನಂತರ ಅನ್ನಪೂರ್ಣೆಶ್ವರಿ ದೇವರಿಗೆ ಹಾಗೂ ಕರ್ತೃ ಗದ್ದುಗೆಗೆ ಕುಂಬಾಭಿಷೇಕ ಹಾಗೂ ರುದ್ರಪಠಣವು ಪೂಜಾ ಸಮಿತಿಯ ವೈದಿಕ ವೃಂದದಿಂದ ಜರುಗಿತು.

ಶ್ರೀಮಠದ ಸಂಸ್ಥಾಪಕರಾದ ಅಡವೀಂದ್ರಸ್ವಾಮಿಗಳು, ಷಣ್ಮುಖ ಸ್ವಾಮಿಗಳು, ವಿರೂಪಾಕ್ಷ ಸ್ವಾಮಿಗಳು, ಶರಣಯ್ಯ ಸ್ವಾಮಿಗಳವರ ಪುಣ್ಯಸ್ಮರಣೋತ್ಸವವು ಜರುಗಿತು.

ಶ್ರೀಮಠದ ಧರ್ಮದರ್ಶಿ ಪೂಜ್ಯ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಅವರ ಸಮ್ಮುಖದಲ್ಲಿ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ಬಸವರಾಜ ಪಲ್ಲೇದ, ಜಾತ್ರಾ ಮಹೋತ್ಸವದ ಮಹಿಳಾ ಸಮಿತಿಯ ಅಧ್ಯಕ್ಷೆ ಲೀಲಾವತಿ ಬಿಳೇಯಲಿ ಉಪಸ್ಥಿತಿಯಲ್ಲಿ ಜರುಗಿದ ಕಾರ್ಯಕ್ರಮಗಳಲ್ಲಿ ಎಲ್ಲ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಭಕ್ತಾಧಿಗಳು ಪಾಲ್ಗೊಂಡಿದ್ದರು.

ಹಿಂಗಾರು ಮಳೆಗೆ ಭರ್ತಿಯಾದ ಜಲಮೂಲಗಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ಒಂದು ವಾರದಿಂದ ಬಿಟ್ಟೂ ಬಿಡದೇ ಸುರಿಯುತ್ತಿರುವ ಹಿಂಗಾರಿನ ಮಳೆಗೆ ಇಳೆ-ಬೆಳೆಯೆಲ್ಲಾ ಜಲಾವೃತಗೊಂಡಿವೆ. ಮುಂಗಾರಿನ ಹತ್ತಿ, ಶೇಂಗಾ, ಮೆಣಸಿನಕಾಯಿ, ಈರುಳ್ಳಿ ಬೆಳೆಗಳು ಜಲಾವೃತಗೊಂಡಿದ್ದು, ಬಿತ್ತನೆಗೆ ಸಿದ್ಧಗೊಂಡ ಜಮೀನುಗಳಲ್ಲಿ ನೀರು ನಿಂತಿವೆ.

ತಾಲೂಕಿನಲ್ಲಿ ಬಹುತೇಕ ತಗ್ಗು ಗುಂಡಿಗಳಿಂದ ಕೂಡಿರುವ ರಸ್ತೆಗಳಲ್ಲಿ ಮತ್ತು ಅಲ್ಲಲ್ಲಿ ರಸ್ತೆಗೆ ಅಡ್ಡಲಾಗಿ ಹಳ್ಳ ಹರಿದಿದ್ದರಿಂದ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ಥಗೊಂಡಿದೆ. ಲಕ್ಷ್ಮೇಶ್ವರ ಸೇರಿ ತಾಲೂಕಿನ ಬಾಲೆಹೊಸೂರ, ಶಿಗ್ಲಿ, ರಾಮಗೇರಿ ಸೇರಿ ಹಲವು ಮನೆಗಳು ಕುಸಿದಿವೆ. ಶನಿವಾರ ಕೊಂಡಿಕೊಪ್ಪ ಗ್ರಾಮದಲ್ಲಿ ಮನೆ ಕುಸಿದು ಉಡಚವ್ವ ಬಾಣದ ಎಂಬ ಮಹಿಳೆ ಗಾಯಗೊಂಡಿದ್ದಾಳೆ.

ಹಿಂಗಾರಿನ ಮಳೆ ಒಂದೆಡೆ ಹರ್ಷ ತಂದಿದ್ದರೆ, ನಿರಂತರ ಮಳೆಯಿಂದ ಈಗಾಗಲೇ ಕಟಾವಿಗೆ ಬಂದಿರುವ ಮೆಕ್ಕೆಜೋಳ, ಹತ್ತಿ, ಶೇಂಗಾ, ಮೆಣಸಿನಕಾಯಿ ಇತರೇ ಬೆಳೆಗಾರರು ಚಿಂತೆಗೀಡಾಗಿದ್ದಾ-ರೆ. ಆದಾಗ್ಯೂ ಮಳೆ ಬಂದರೆ ಕೇಡಲ್ಲ ಎಂಬ ಮಾತಿನಂತೆ ಕಳೆದ ಎರಡು ವರ್ಷದಿಂದ ದೊಡ್ಡ ಪ್ರಮಾಣದ ಮಳೆಯಾಗದೇ ಕೆರೆ, ಹಳ್ಳ, ಬಾಂದಾರ, ಬದುವು ಇತರೆಲ್ಲ ಜಲಮೂಲಗಳಲ್ಲಿ ನೀರು ಬರಿದಾಗಿತ್ತು.

ಇದೀಗ ಜಲಮೂಲಗಳು ಭರ್ತಿಯಾಗಿರುವುದು ಹರ್ಷ ತಂದಿದೆ. ಹಿಂಗಾರಿ ಬಿತ್ತನೆಗೆ ಸಿದ್ಧತೆ ಮಾಡಿಕೊಂಡಿರುವ ರೈತರಿಗೆ ಮಳೆ ಬಿಡುವು ಕೊಡದ್ದರಿಂದ ಮತ್ತೆ ಜಮೀನು ಹದಗೊಳಿಸಿ ಬಿತ್ತನೆ ಮಾಡಲು ಕಾಲಮಿತಿ ಮೀರುವ ಆತಂಕವೂ ಶುರುವಾಗಿದೆ.

ಸಿದ್ಧಲಿಂಗ ಶ್ರೀಗಳು ಶ್ರೇಷ್ಠ ಸಂತರು

▶▶ ಮೊದಲನೇ ಪುಟದಿಂದ

ವಿ.ಪ ಸದಸ್ಯ ಎಸ್.ವಿ ಸಂಕನೂರ ಮಾತನಾಡಿ, ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಭೌತಿಕವಾಗಿ ನಮ್ಮನ್ನು ಅಗಲಿದರೂ ಅವರ ಶ್ರೇಷ್ಠ ಸಂದೇಶಗಳು ಹಾಗೂ ಸತ್ಕಾರ್ಯಗಳ ಮೂಲಕ ಅಜರಾಮರವಾಗಿದ್ದಾರೆ.

ಗಂಧದ ಕೊರಡಿನಂತೆ, ದೀಪದ ಬೆಳಕಿನಂತೆ ಜನಕಲ್ಯಾಣಕ್ಕಾಗಿ ಶ್ರಮಿಸಿದ್ದ ಶ್ರೀಗಳು ಬಸವತತ್ವವನ್ನು ಜನರಿಗೆ ತಲುಪಿಸಲು ಅವಿರತ ಶ್ರಮ ವಹಿಸಿದರು. ಪುಸ್ತಕ ಪ್ರಕಟಣೆ, ನಿರಂತರ ಶಿವಾನುಭವ ಕಾರ್ಯಕ್ರಮಗಳು, ಕಪ್ಪತಗುಡ್ಡ ರಕ್ಷಣೆ ಹೀಗೆ ಶ್ರೀಗಳ ಸಾಧನೆಯ ಮಜಲುಗಳು ಹಲವಾರಿದ್ದು, ಅವರ ಅಗಲಿಕೆ ನಂತರ ತೋಂಟದಾರ್ಯ ವಿದ್ಯಾಪೀಠದ ಕೆಲವು ನೌಕರರು ಹಾಗೂ ಪತ್ತಿನ ಸಂಘದ ಆದಾಯದಲ್ಲಿ ಸಿದ್ಧಲಿಂಗ ಶ್ರೀಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ನೀಡುತ್ತಿರುವುದು ಹೆಮ್ಮೆಯ ವಿಷಯ ಎಂದರು.

ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಕಪ್ಪತಗುಡ್ಡ ಹೋರಾಟವನ್ನು ಕೈಗೆತ್ತಿಕೊಳ್ಳದಿದ್ದರೆ ಇಂದು ಕಪ್ಪತಗುಡ್ಡ ಉಳಿದು ಏಷ್ಯಾ ಖಂಡದಲ್ಲೇ ಶುದ್ಧ ಗಾಳಿ ನೀಡುವ ತಾಣವಾಗುತ್ತಿರಲಿಲ್ಲ. ಶ್ರೀಗಳು ನಾನು ಶಾಸಕನಾಗಿದ್ದಾಗ ಕೈಗೊಂಡ ಅನೇಕ ಕೆಲಸಗಳನ್ನು ವಿಶೇಷವಾಗಿ ಪರಿಸರಕ್ಕೆ ಸಂಬಂಧಪಟ್ಟ, ಕೆರೆ ತುಂಬಿಸುವ ಕಾರ್ಯಗಳನ್ನು ಶ್ಲಾಘಿಸುತ್ತಿದ್ದರು. ಪೂಜ್ಯರು ಹಾಡುತ್ತಿದ್ದ ಜಾನಪದ ಗೀತೆಗಳನ್ನು ನನಗೆ ಈ ವೇದಿಕೆಯಲ್ಲಿ ಹಾಡಲು ಸಂತಸ ಎನಿಸುತ್ತದೆ ಎಂದು ಜಾನಪದ ಗೀತೆಗಳನ್ನು ಸುಶ್ರಾವ್ಯವಾಗಿ ಹಾಡಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿಗಳಾದ ಬಿ.ಡಿ. ಕುಂಬಾರ ಮಾತನಾಡಿ, ಲಿಂ.ಸಿದ್ಧಲಿಂಗ ಶ್ರೀಗಳು ನಾನು ಹುಟ್ಟಿದ ವಿಜಯಪುರ ಜಿಲ್ಲೆಯವರು ಎಂಬುದು ನನಗೆ ಅಭಿಮಾನ ಎನಿಸುತ್ತದೆ. ಗದಗ ಪೀಠಕ್ಕೆ ಅವರು ಪಾದಾರ್ಪಣೆ ಮಾಡುವಾಗ ನಾನು ಈ ಮಠದ ಶ್ರೀಮಂತಿಕೆಯ ಬದಲಿಗೆ ಭಕ್ತರ ಹೃದಯ ಶ್ರೀಮಂತಿಕೆ ನೋಡಿ ಈ ಮಠಕ್ಕೆ ಬಂದಿದ್ದೇನೆ ಎಂದು ಹೇಳಿದ್ದರು. ಗೋಕಾಕ್ ವರದಿ ಜಾರಿಗಾಗಿ ನಡೆದ ಹೋರಾಟಕ್ಕೆ ಮುನ್ನುಡಿ ಬರೆದಿದ್ದ ಶ್ರೀಗಳು ನಾಡು-ನುಡಿಗಾಗಿ ಅನನ್ಯ ಸೇವೆ ಸಲ್ಲಿಸಿದ್ದಾರೆ ಎಂದರು.

ಮರೇಗುದ್ದಿ ಅಡವಿ ಸಿದ್ಧೇಶ್ವರಮಠದ ಪೂಜ್ಯ ಡಾ.ನಿರುಪಾಧೀಶ್ವರ ಮಹಾ ಸ್ವಾಮಿಗಳನ್ನು ಸಂಮಾನಿಸಲಾಯಿತು. ಆಳಂದದ ಕೋರಣೇಶ್ವರ ಮಹಾಸ್ವಾಮಿಗಳು, ಭೈರನಟ್ಟಿಯ ಶಾಂತಲಿಂಗ ಮಹಾಸ್ವಾಮಿಗಳು, ಸಂಡೂರಿನ ಪ್ರಭು ಮಹಾಸ್ವಾಮಿಗಳು, ಅರಸಿಕೇರಿ ಮಠದ ಶಾಂತಲಿಂಗ ದೇಶಿಕೇಂದ್ರ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು. ಸಾನ್ನ

ಅಂಬಯ್ಯಸ್ವಾಮಿಮಠದ ನಂದಾ ದೀಪಾರಾಧನೆ, ಸನ್ಮಾನ ಕಾರ್ಯಕ್ರಮದಲ್ಲಿ ಡಾ.ಮಲ್ಲಿಕಾರ್ಜುನ ಶ್ರೀಗಳು

ಸುಂದರ ಸಮಾಜ ಕಟ್ಟುವತ್ತ ಸಾಗಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸತ್ಯ, ಧರ್ಮ, ನ್ಯಾಯ, ನೀತಿಗಳ ಗೆಲುವಿನ ಸಂಕೇತದ ವಿಜಯದಶಮಿ ಹಬ್ಬದ ಸಂದರ್ಭದಲ್ಲಿ ಎಲ್ಲರೂ ಬದುಕಿನಲ್ಲಿ ಪರಸ್ಪರ ಪ್ರೀತಿ, ಸಹನೆ, ಆದರ್ಶ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಸುಂದರ ಸಮಾಜ ಕಟ್ಟುವತ್ತ ಸಾಗಬೇಕಾಗಿದೆ ಎಂದು ಧಾರವಾಡ ಮುರಘಾಮಠದ ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದ ಲಿಂಬಯ್ಯಸ್ವಾಮಿಮಠದಲ್ಲಿ ನವರಾತ್ರಿ ನಿಮಿತ್ತ ನಡೆದ ನಂದಾ ದೀಪಾರಾಧನೆ ಮತ್ತು ಸನ್ಮಾನ ಕಾರ್ಯಕ್ರಮ ಸಾನ್ನಿಧ್ಯ ವಹಿಸಿ ಮಾತನಾಡಿ, ಸಮಾಜದಲ್ಲಿರುವ ಹಿರಿಯರ ಅನುಭವ ಸಮಾಜಕ್ಕೆ ಒಂದು ದಾರಿದೀಪವಿದ್ದಂತೆ. ಅದನ್ನು ಬಳಸಿಕೊಳ್ಳಬೇಕು. ಪಟ್ಟಣದಲ್ಲಿ ಲಿಂಬಯ್ಯಸ್ವಾಮಿಮಠ ಕಾಯಕ, ದಾಸೋಹ, ಅನುಭವ ಸಿದ್ಧಾಂತದ ಪರಂಪರೆ, ಆಚಾರ ತಳಹದಿಯ ಮೇಲೆ ನಿಂತು ಕೆಲಸ ಮಾಡುವ ಮಠವಾಗಿದೆ. ಪ್ರತಿಷ್ಠಾನದಿಂದ ಹಮ್ಮಿಕೊಳ್ಳುವ ದೇಹದಾನ, ನೇತ್ರದಾನ

ಕಾರ್ಯಕ್ರಮ ಸಮಾಜಕ್ಕೆ ಒಳ್ಳೆಯ ಸಂದೇಶವಾಗಿದೆ. ಇಂತಹ ಮಾದರಿ ಕಾರ್ಯಗಳು ಇನ್ನೊಬ್ಬರಿಗೆ ಮಾರ್ಗದರ್ಶನವಾಗಲಿ ಎಂದು ನುಡಿದರು.

ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಶ್ರೀಮಠದ ಪರಂಪರೆ, ಸಂಪ್ರದಾಯ ಮತ್ತು ಪ್ರತಿಷ್ಠಾನದ ಉದ್ದೇಶ ಮತ್ತು ನಮ್ಮ ಹಿರಿಯರು ಹಾಕಿಕೊಟ್ಟ ಸಮಾಜಮುಖಿ ಚಿಂತನೆಗಳನ್ನು ಮುಂದುವರೆಸಿಕೊಂಡು ಹೋಗುವದಾಗಿ ಹೇಳಿದರು.

ಅಗಡಿ ಇಂಜನಿಯರಿಂಗ್ ಕಾಲೇಜಿನ ಉಪನ್ಯಾಸಕ ಸೋಮಶೇಖರ ಕೆರಿಮನಿ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಹಲವಾರು ವರ್ಷಗಳಿಂದ ಮೂಳೆ ಮುರಿತಕ್ಕೆ ಚಿಕಿತ್ಸೆ ನೀಡುವ ಕಾಯಕದಲ್ಲಿ ನಿಸ್ವಾರ್ಥ ಸೇವೆ

ನವರಾತ್ರಿ ಹಬ್ಬದ ಪವಿತ್ರ ಕಾಲದಲ್ಲಿ ಕೈಗೊಳ್ಳುವ ಧರ್ಮ ಕಾರ್ಯದಿಂದ ಮನುಷ್ಯನಲ್ಲಿನ ಅಜ್ಞಾನ, ಅಂಧಕಾರ, ದುರ್ಗುಣಗಳು ನಾಶವಾಗಿ ಸಾತ್ವಿಕ ಸದ್ಗುಣಗಳೊಂದಿಗೆ ದೈವತ್ವ ಪ್ರಾಪ್ತವಾಗುತ್ತದೆ. ಸಮಾಜದ ತೆರೆಮರೆಯಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಸುಪ್ತಚೇತನ ಶ್ರೀಮಠದಿಂದ ಗೌರವಿಸುವ ಕಾರ್ಯ ಶ್ಲಾಘನೀಯ. ಹಠಯೋಗ, ಶಿವಯೋಗದಿಂದ ಕಟ್ಟಿದ ಮಠದಲ್ಲಿ ಶರಣ ಸಂಸ್ಕೃತಿಯನ್ನು ಹುಟ್ಟು ಹಾಕಿ ಲಿಂಗೈಕ್ಯರಾದ ಲಿಂಬಯ್ಯಸ್ವಾಮಿಮಠದ ಸಹೋದರರು ಹಾಕಿಕೊಟ್ಟ ಸಮಾಜಮುಖಿ ಕಾರ್ಯ ಮುಂದುವರೆಯಲಿ ಎಂದು ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ಆಶಿಸಿದರು.

ಮಾಡುತ್ತಿರುವ ಕೆಸರಳ್ಳಿಯ ಹಾಲಯ್ಯ ಕುಲಕರ್ಣಿ ಅವರಿಗೆ 'ಕಾಯಕಜೀವಿ', ಪಟ್ಟಣದ ಪ್ರತಿಮಾ ಮಹಾಂತಶೆಟ್ಟರ ಅವರಿಗೆ 'ಆದರ್ಶ ಸಾತ್ವಿಕ ಜೀವಿ' ಮತ್ತು ಫಕ್ಕೀರಪ್ಪ ಕಳ್ಳಿಮನಿ ಅವರಿಗೆ 'ಸಮಾಜ ಜೀವಿ' ಎಂಬ ಬಿರುದಾಂಕಿತದ ಗೌರವ ಪುರಸ್ಕಾರ ನೀಡಲಾಯಿತು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಸ್ ಆಡೂರ, ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ನಾಗರಾಜ ಶಿಗ್ಲಿ ಅವರನ್ನು ಸನ್ಮಾನಿಸಲಾಯಿತು. ಹರ್ಲಾಪುರದ ಸಾಂಬಯ್ಯ ಹಿರೇಮಠ ಹಾಗೂ ಸಂಗಡಿಗರು ಜಾನಪದ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಸಭೆಯ ಅಧ್ಯಕ್ಷತೆಯನ್ನು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ವಹಿಸಿ ಮಾತನಾಡಿದರು. ಪ್ರತಿಷ್ಠಾನದ ಧರ್ಮದರ್ಶಿಗಳಾದ ಆನಂದ ಗಡ್ಡದೇವರಮಠ, ಚಿದಾನಂದ ಲಿಂಬಯ್ಯಸ್ವಾಮಿಮಠ, ಸುಭಾಸ ಓದುನವರ, ದಿಲೀಪ ನಾಯರ, ಈಶ್ವರ ಮೆಡ್ಲೇರಿ, ನಿಂಗಪ್ಪ ಬನ್ನಿ ಸೇರಿ ಪ್ರತಿಷ್ಠಾನದ ಧರ್ಮದರ್ಶಿಗಳು, ಹಿರಿಯರು ಉಪಸ್ಥಿತರಿದ್ದರು.

ಮಹೇಶ ಲಿಂಬಯ್ಯಸ್ವಾಮಿಮಠ ಸ್ವಾಗತಿಸಿದರು. ಸೌಭಾಗ್ಯ ಕವಲೂರಮಠ, ಸುಲಕ್ಷಣಾ ಶ್ವೇತಾ, ದಿವ್ಯಾ, ವೇದಾಂತ ಲಿಂಬಯ್ಯಸ್ವಾಮಿಮಠ ನಿರ್ವಹಿಸಿದರು.

ಭಕ್ತರಲ್ಲಿ ಹರ್ಷ ಮೂಡಿಸಿದ ಸೋಮೇಶ್ವರ ಕಾರಣಿಕ

'ಸಂಪಾತಲೇ ಪರಾಕ್'

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ಶ್ರೀ ಸೋಮನಾಥನಿಗೆ ವಿಶೇಷ ಪೂಜಾ ಕೈಂಕರ್ಯಗಳು ಕಳೆದ 9 ದಿನಗಳ ಕಾಲ ನಡೆದವು. ವಿಜಯದಶಮಿ ದಿನ ಶನಿವಾರ ಸಂಪಾತಲೇ ಪರಾಕ್ ಎಂದು ಕಾರಣಿಕ ವಾಣಿ ಮೊಳಗಿ ಭಕ್ತರು ಹರ್ಷೋದ್ಗಾರ ವ್ಯಕ್ತಪಡಿಸಿದರು.

ಪಟ್ಟಣದ ಮ್ಯಾಗೇರಿ ಓಣಿಯ ಬೀರೇಶ್ವರ, ಕಡಕೋಳ ಸಿದ್ದೇಶ್ವರ, ಮೈಲಾರಲಿಂಗೇಶ್ವರ, ಹೊನಕೇರಿ ಮಲ್ಲಯ್ಯ, ವೀರಭದ್ರೇಶ್ವರ, ಯಲ್ಲಮ್ಮದೇವಿ, ಹನುಮಂತದೇವರ ಸೇರಿದಂತೆ ಪಟ್ಟಣದ ಎಲ್ಲ ದೇವಸ್ಥಾನದ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿ ಇರಿಸಿ ವಾದ್ಯಗಳೊಂದಿಗೆ ಪಟ್ಟಣದ ಹೊರವಲಯದ ದೇವಸ್ಥಾನಗಳಲ್ಲಿ ಬನ್ನಿ ಮುಡಿಯುವ ಕಾರ್ಯಕ್ರಮ

ನೆರವೇರಿಸಲಾಯಿತು. ದಕ್ಷಿಣ ದ್ವಾರದ ಬಳಿ ವೀರಭದ್ರ ದೇವರ ವಡಪುಗಳನ್ನು ಹೇಳಲಾಯಿತು. ತಡರಾತ್ರಿ ಮ್ಯಾಗೇರಿ ಓಣಿಯ ಹೊನಕೇರಿ ಮಲ್ಲಯ್ಯನ ದೇವಸ್ಥಾನದಲ್ಲಿ ಕಬ್ಬಿಣದ ಸರಪಳಿ ಹರಿಯುವ ಸಂಪ್ರದಾಯದ ಪವಾಡವನ್ನು ಗೊರಪ್ಪಜ್ಜ ನೀಲಪ್ಪ ಕೋರಿ ನೆರವೇರಿಸಿದರು.

ರಾತ್ರಿ ಸೋಮೇಶ್ವರ ದೇವರ ಪಾದಗಟ್ಟಿ ಹತ್ತಿರ ಸೇರಿದ್ದ ಸಾವಿರಾರು ಭಕ್ತರ ಸಮ್ಮುಖದಲ್ಲಿ ಕಾರ್ಣಿಕ ನುಡಿಯುವ ನಾಗಪ್ಪ ಬಿಂಗಿ ಅವರು ಮುಳ್ಳಿನ ಆವಿಗೆ ಮೇಲೆ ನಿಂತು, ಸದ್ದಲೇ ಎಂದಾಗ ಇಡಿ ಜನಸ್ತೋಮ ಶಾಂತವಾಯಿತು. ದಸರಾ ಹಬ್ಬದಲ್ಲಿ 9 ದಿನಗಳಿಂದ ಹಣ್ಣು, ಹಾಲು ಸೇವಿಸಿ ಉಪವಾಸ ವ್ರತಾಚರಣೆ ಮಾಡಿ ಕಾರಣಿಕ ದಿನದಂದು ಮುಳ್ಳಿನ ಆವಿಗೆ ಮೇಲೆ ನಿಂತು ಕಾರಣಿಕ ನುಡಿಯುವದು ಇಲ್ಲಿನ ಸಂಪ್ರದಾಯವಾಗಿದೆ. ಈ ಬಾರಿ 'ಸಂಪಾತಲೇ ಪರಾಕ್' ವಾಣಿ ರೈತರ ಮೊಗದಲ್ಲಿ ಸಂತಸ ಮೂಡಿಸಿದೆ. ದೇವಸ್ಥಾನದ ಅರ್ಚಕರು, ಸೋಮೇಶ್ವರ ಸೇವಾ ಟ್ರಸ್ಟ್ ಕಮಿಟಿ, ಜಾತ್ರಾ ಕಮೀಟಿ ಹಾಗೂ ಹಿರಿಯರು ಮುಖಂಡರು ಪಾಲ್ಗೊಂಡಿದ್ದರು.

ಭಾರತದಲ್ಲಿ ಹೃದಯವಂತಿಕೆಗೆ ಮೊದಲ ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದೇಶಗಳಲ್ಲಿ ಬುದ್ಧಿಗೆ ಮಹತ್ವ ನೀಡಿದರೆ, ನಮ್ಮ ಭಾರತದಲ್ಲಿ ಹೃದಯವಂತಿಕೆಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಇದು ನಮ್ಮ ದೇಶದ ಸಂಸ್ಕೃತಿಯಾಗಿದೆ ಎಂದು ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಪಟ್ಟಣದ ನವನಗರದಲ್ಲಿನ ಹಂಪಸಾಗರ ನವಲಿ ಕಟ್ಟಿಮನಿ ಸಂಸ್ಥಾನ ಹಿರೇಮಠದಲ್ಲಿ ಶ್ರೀಮಠದ ನೂತನ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಆಶೀರ್ವಚನ ನೀಡಿದರು.

ಮನುಷ್ಯನಲ್ಲಿ ವೈಭವದ ಜೀವನಕ್ಕೆ ಬೇಕಾಗುವ ಎಲ್ಲ ಸಂಪತ್ತು ಇದೆ. ಆದರೆ ಜೀವನದಲ್ಲಿ ನೆಮ್ಮದಿಯಿಲ್ಲ. ಏಕೆಂದರೆ ಮಠ-ಮಂದಿರದ ಪರಂಪರೆಯನ್ನು ನಾವು ಮರೆಯುತ್ತಿದ್ದೇವೆ. ಅದಕ್ಕೆ ಎಷ್ಟೇ ಆಸ್ತಿ ಇದ್ದರೂ ಸಮಸ್ಯೆಯಿಂದ ಮುಕ್ತಿ ಹೊಂದಲು

ಸಾಧ್ಯವಾಗುತ್ತಿಲ್ಲ. ಮನುಷ್ಯನಲ್ಲಿ ಸಂಸ್ಕೃತಿ, ಸಂಸ್ಕಾರ ಬರಬೇಕಾದರೆ ಮಠ-ಮಂದಿರಕ್ಕೆ ಹೋಗಬೇಕು. ಆಗ ಮಾತ್ರ ಸಮಸ್ಯೆಯಿಂದ ಮುಕ್ತಿ ಪಡೆಯಲು ಸಾಧ್ಯ. ಭಾರತ ಭಕ್ತಿ ಮತ್ತು ಧರ್ಮ ಪ್ರಧಾನ ದೇಶವಾಗಿದೆ. ದೇಶದ ಜನ ದೇವರ ಮತ್ತು ಧರ್ಮದ ಮೇಲೆ ಅಚಲವಾದ ಶ್ರದ್ಧೆ ಇಟ್ಟಿದ್ದಾರೆ ಎಂದರು.

ಹಂಪಸಾಗರ-ನರೇಗಲ್ಲ ನವಲಿ ಹಿರೇಮಠದ ಅಭಿನವ ಶಿವಲಿಂಗೇಶ್ವರ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಡಾ. ಮಲ್ಲಯ್ಯ ಚಪ್ಪನ್ನಮಠ, ಪ.ಪಂ ಮಾಜಿ ಅಧ್ಯಕ್ಷ ಉಮೇಶ ಸಂಗನಾಳಮಠ, ಕಲ್ಮೇಶ ತೊಂಡಿಹಾಳ, ಉಮೇಶ ಉಮಚಗಿ, ಮಲ್ಲನಗೌಡ ಭೂಮನಗೌಡ್ರ, ಶಿವಪುತ್ರಪ್ಪ ಸಂಗನಾಳ, ಮುತ್ತಪ್ಪ ಹಡಪದ, ಈರಣ್ಣ ಗುಜಮಾಗಡಿ, ಮುತ್ತಣ್ಣ ಪಾಯಪ್ಪಗೌಡ್ರ, ಮಹಾದೇವಸ್ವಾಮಿ ನವಲಿಹಿರೇಮಠ ಸೇರಿದಂತೆ ಇತರರಿದ್ದರು.

ಬೀಳ್ಕೊಡುಗೆ ಸಮಾರಂಭದ ಸಾನ್ನಿಧ್ಯ ವಹಿಸಿದ ರಂಭಾಪುರಿ ಶ್ರೀಗಳ ನುಡಿ

ಸಮನ್ವಯತೆಯಿಂದ ದಸರಾ ದರ್ಬಾರ್ ಯಶಸ್ವಿ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಅಬ್ಬಿಗೇರಿಯಲ್ಲಿ ಕಳೆದ 10 ದಿನಗಳ ಕಾಲ ರಂಭಾಪುರಿ ಪೀಠದ ಆಶ್ರಯದಲ್ಲಿ ನಡೆದ ಧರ್ಮ ಸಮ್ಮೇಳನ ಅಭೂತಪೂರ್ವ ಯಶಸ್ಸು ಕಂಡಿದೆ. ಇದಕ್ಕೆ ಇಲ್ಲಿನ ಜನಗಳ ನಡುವಿನ ಧರ್ಮ ಸಮನ್ವಯತೆಯೇ ಕಾರಣ ಎಂದು ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ವೀರಸೋಮೇಶ್ವರ ಜಗದ್ಗುರುಗಳು ಹರ್ಷ ವ್ಯಕ್ತಪಡಿಸಿದರು.

ಸಮೀಪದ ಅಬ್ಬಿಗೇರಿಯಲ್ಲಿ ಜಗದ್ಗುರುಗಳ ಬೀಳ್ಕೊಡುಗೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ರಂಭಾಪುರಿ ಪೀಠದ ದಸರಾ ದರ್ಬಾರ್ ಧರ್ಮ ಸಮ್ಮೇಳನ ವರ್ಷದಿಂದ ವರ್ಷಕ್ಕೆ ದಾಖಲೆ ಪ್ರಮಾಣದಲ್ಲಿ ಯಶಸ್ವಿಯಾಗುತ್ತಿದೆ. ಧರ್ಮ ಸಮ್ಮೇಳನ ಎಲ್ಲ ಜಾತಿ, ಜನಾಂಗದ ಭಾವನೆಗೆ ಸ್ಪಂದಿಸಿ

ಸಂತೋಷವನ್ನುಂಟುಮಾಡುವಲ್ಲಿ ಯಶಸ್ವಿಯಾಗಿದೆ. ಗ್ರಾಮೀಣ ಭಾಗದಲ್ಲಿ ಇದೇ ಪ್ರಥಮ ಬಾರಿಗೆ ದಸರಾ ದರ್ಬಾರ್ ಹಮ್ಮಿಕೊಂಡಿದ್ದು, ಅದು ಹೇಗೆ ನಡೆಯಲಿದೆ ಎಂಬ ಆತಂಕ ಭಕ್ತರಲ್ಲಿತ್ತು. ಆದರೆ, ಅಬ್ಬಿಗೇರಿ ಹಾಗೂ ಸುತ್ತಲಿನ ಗ್ರಾಮಗಳ ಭಕ್ತರು ಸಮ್ಮೇಳನವನ್ನು ಯಶಸ್ವಿಗೊಳಿಸುವ ಮೂಲಕ ಎಲ್ಲ ಆತಂಕಗಳಿಗೆ ಪೂರ್ಣ ವಿರಾಮ ನೀಡಿದ್ದಾರೆ ಎಂದರು.

ಅಬ್ಬಿಗೇರಿಯ ದಸರಾ ದರ್ಬಾರ್ ಎಲ್ಲ ದರ್ಬಾರ್‌ಗಳಿಗಿಂತ ವಿಶೇಷ ವಾಗಿದ್ದು, ಇತರರಿಗೆ ಮಾದರಿಯಾಗಿದೆ. ದಸರಾ ದರ್ಬಾರ್ ಅತ್ಯಂತ ಯಶಸ್ವಿಯಾಗಲು ಇಲ್ಲಿನ ಧರ್ಮ-ಧರ್ಮಗಳ ಮತ್ತು ವ್ಯಕ್ತಿ-ವ್ಯಕ್ತಿಗಳ ನಡುವೆ ಇರುವ ಸಾಮರಸ್ಯದಿಂದ ಸಾಧ್ಯವಾಯಿತು. ಧರ್ಮವೂ ಸೇರಿದಂತೆ ಕಲೆ, ಸಾಹಿತ್ಯ, ಸಂಗೀತ, ವಿವಿಧ ಕ್ಷೇತ್ರಗಳ ಪರಿಚಯ ಮಾಡುವ ಕಾರ್ಯ ಅತ್ಯಂತ ಯಶಸ್ವಿಯಾಗಿದೆ. ಧರ್ಮ, ಸಂಸ್ಕೃತಿ ಮತ್ತು ಸಾತ್ವಿಕ ಸಮಾಜ ನಿರ್ಮಾಣದ ಕಾರ್ಯವನ್ನು ಈ ಧರ್ಮ ಸಮ್ಮೇಳನವು ಅತ್ಯಂತ ಪ್ರಾಮಾಣಿಕತನದಿಂದ ಯಶಸ್ವಿಯಾಗಿ ಮಾಡಿಕೊಂಡು ಬಂದಿದೆ ಎಂದರು.

ಸಿದ್ದರಬೆಟ್ಟ-ಅಬ್ಬಿಗೇರಿ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಸಂಗೊಳ್ಳಿಯ ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ, ಶಾಸಕ ಜಿ.ಎಸ್. ಪಾಟೀಲ, ಅಂದಪ್ಪ ವೀರಾಪೂರ, ಭರಮಪ್ಪ ಹನುಮನಾಳ, ಬಾಬುಗೌಡ ಪಾಟೀಲ, ಸುರೇಶ ನಾಯ್ಕರ, ವಿಜಯಕುಮಾರ ಹಿರೇಮಠ, ಮಂಜುನಾಥ ಹಿರೇಮಠ, ಬಿ.ವಿ. ನೀರಲೋಟಿ, ಎಚ್.ಟಿ. ದ್ವಾಸಲ ಮುಂತಾದವರಿದ್ದರು.

ಇಲ್ಲಿನ ಪ್ರಸಾದ ಸೇವೆಯ ಅಚ್ಚುಕಟ್ಟುತನ ವಿಶೇಷವಾಗಿತ್ತು. ಪ್ರಸಾದಕ್ಕಾಗಿ ಮುಸ್ಲಿಂ ಸಮಾಜದ ಬಾಂಧವರೂ ಸಹ 8 ಕ್ವಿಂಟಲ್ ಗೋಧಿ ಹಿಟ್ಟಿನ ಚಪಾತಿ ಮಾಡಿಕೊಟ್ಟು, ಸಮಾರಂಭದಲ್ಲಿ ಪಾಲ್ಗೊಂಡಿದ್ದು ಈ ಸಮ್ಮೇಳನದ ವೈಶಿಷ್ಟ್ಯಗಳಲ್ಲಿ ಒಂದು. ಈ ಸಮನ್ವಯತೆ ಎಲ್ಲರಲ್ಲಿಯೂ ಎಂದಿಗೂ ಹೀಗೇ ಇರಲಿ ಎಂದು ಜಗದ್ಗುರುಗಳು ಅಪ್ಪಣೆ ಕೊಡಿಸಿದರು.

ಗೋಸಾವಿ ಸಮಾಜ ಬಾಂಧವರ ಮೇಲೆ ಅನ್ಯ ಕೋಮಿನ ಯುವಕರ ಹಲ್ಲೆ

ಕ್ರಮಕ್ಕೆ ಆಗ್ರಹಿಸಿ ಶ್ರೀರಾಮ ಸೇನೆಯಿಂದ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯದಶಮಿಯ ದಿನ ಗೋಸಾವಿ ಸಮಾಜ ಬಾಂಧವರು ದುರ್ಗಾದೇವಿ ಮೂರ್ತಿಯನ್ನು ವಿಸರ್ಜನೆ ಮಾಡಿ ಬರುವಾಗ ಒಂದು ನಿರ್ದಿಷ್ಟ ಸಮುದಾಯದ ಯುವಕರು ಹಲ್ಲೆ ನಡೆಸಿದ ಘಟನೆ ಲಕ್ಷ್ಮೇಶ್ವರದಲ್ಲಿ ನಡೆದಿದ್ದು, ಈ ಬಗ್ಗೆ ಪೊಲೀಸ್ ಠಾಣೆಗೆ ದೂರು ಸಲ್ಲಿಸಲು ಬಂದ ಹಿಂದೂ ಸಂಘಟನೆಯ ಕಾರ್ಯಕರ್ತರ ಮೇಲೆ ಲಾಠಿ ಪ್ರಹಾರ ನಡೆಸಲಾಗಿದೆ ಎಂದು ಶ್ರೀರಾಮ ಸೇನಾ, ಗೋಸಾವಿ ಸಮುದಾಯದ ನೂರಾರು ಜನರು ಶಿಗ್ಲಿ ವರ್ತುಳದಲ್ಲಿ ದಿಢೀರ್ ಪ್ರತಿಭಟನೆ ನಡೆಸಿ, ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆ ಮಾಡಿದ ಪೊಲೀಸ್ ಅಧಿಕಾರಿಯನ್ನು ಅಮಾನತು ಮಾಡಬೇಕು, ಹಿಂದೂ ಯುವಕರನ್ನು ಥಳಿಸಿದ ಒಂದು ನಿರ್ದಿಷ್ಟ ಕೋಮಿನ ಯುವಕರನ್ನು ಕೂಡಲೇ ಬಂಧಿಸಬೇಕೆಂದು ಆಗ್ರಹಿಸಿದರು.

ಇದೇ ಪ್ರಕರಣಕ್ಕೆ ಸಂಬಂಧಿಸಿ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ, ಲಕ್ಷ್ಮೇಶ್ವರದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ವಿಫಲವಾಗಿದೆ. ಆಕ್ರಮ ಮರಳುಗಾರಿಕೆ ನಡೆಯುತ್ತಿದೆ. ಪರಿಣಾಮ, ಸರಕಾರಕ್ಕೆ ಬರಬೇಕಾದ ರಾಜಸ್ವ ಬಾರದಂತಾಗಿದೆಯೆಂದು ಆರೋಪಿಸಿದರು.

ಗದಗ ಡಿಎಸ್ಪಿ ಜೆ.ಎಚ್. ಇನಾಮದಾರ ಮನವಿ ಸ್ವೀಕರಿಸಿ, ಸೂಕ್ತ ಕ್ರಮ ಜರುಗಿಸುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶ್ರೀರಾಮ ಸೇನಾದ ರಾಜ್ಯ ಶಾರೀರಿಕ ಪ್ರಮುಖ ಮಹೇಶ ರೋಖಡೆ, ಬಸವರಾಜ ಕುರ್ತಕೋಟಿ, ಸತೀಶ ಕುಂಬಾರ, ಚೇತನ ಅಬ್ಬಿಗೇರಿ, ಸುನೀಲ ಮುಳ್ಳಾಳ, ತಾಬಾಳಪ್ಪ ಗೋಸಾವಿ, ಹರೀಶ ಗೋಸಾವಿ, ಆಶಾ ಗೋಸಾವಿ, ವೆಂಕಟೇಶ ಗೋಸಾವಿ, ಕೃಷ್ಣ ಗೋಸಾವಿ, ರಾಜಾ ಗೋಸಾವಿ, ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಮಹಾಂತೇಶ ಅಣ್ಣಿಗೇರಿ, ಆಕಾಶ ಗೋಸಾವಿ, ಕಿಶನ್ ಗೋಸಾವಿ, ಆರತಿ ಗೋಸಾವಿ, ಕಿರಣ ಚಿಲ್ಲೂರಮಠ, ಮಂಜು ಕೊಡಲ್ಲಿ, ಚಿನ್ನು ಹಲ್ದೊಟದ, ರಾಮು ಗೋಸಾವಿ, ಮಹಾಂತೇಶ ಪಾಟೀಲ, ಭರತ್ ಲದ್ದಿ, ಶಿವು ಲದ್ದಿ, ಅಶೋಕ ಭಜಂತ್ರಿ ಮುಂತಾದವರಿದ್ದರು.

ಅಮಾಯಕ ಹಿಂದೂಗಳ ಮೇಲೆ ಅನ್ಯ ಕೋಮಿನ ಯುವಕರು ಹಲ್ಲೆ ಮಾಡಿದ್ದಾರೆ. ಅವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ನ್ಯಾಯ ಕೇಳಲು ಹೋದ ಗೋಸಾವಿ ಸಮಾಜದ ಯುವಕರು, ಮಹಿಳೆಯರು, ಹಿಂದೂ ಕಾರ್ಯಕರ್ತರ ಮೇಲೆ ಲಾಠಿ ಪ್ರಯೋಗಿಸಿದ ಪೊಲೀಸ್ ಅಧಿಕಾರಿಯನ್ನು ಕೂಡಲೇ ಅಮಾನತ್ತು ಮಾಡಬೇಕು. ತಪ್ಪಿದಲ್ಲಿ ಲಕ್ಷ್ಮೇಶ್ವರ ಬಂದ್ ಮಾಡಿ ಪ್ರತಿಭಟನೆ ಮಾಡಲಾಗುವುದು.

– ರಾಜು ಖಾನಪ್ಪನವರ.
ಶ್ರೀರಾಮಸೇನೆ ರಾಜ್ಯ ಕಾರ್ಯದರ್ಶಿ.

ನಿಧನ ವಾರ್ತೆ

ಶಿವವ್ವ ಹಿರೇಮನಿ

ನರೇಗಲ್ಲ: ಸಮೀಪದ ಅಬ್ಬಿಗೇರಿ ಗ್ರಾಮದ ನಿವಾಸಿ ಶಿವವ್ವ ಕೋಂ ಸಿದ್ದಪ್ಪ ಹಿರೇಮನಿ (80) ಭಾನುವಾರ ನಿಧನ ಹೊಂದಿದರು.

ಮೃತರಿಗೆ ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ.

ಲಕ್ಕುಂಡಿಯ ಗ್ರಾಮ ದೇವತೆ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ದೇವಿ ಪುರಾಣ ಮಂಗಲೋತ್ಸವದ ಅಂಗವಾ